ಸಂಪುಟ : 10 ಸಂಚಿಕೆ: 49 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 49 Pages : 4+2 Price : 3.00 Saturday March 22 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ವಿವಿಧ ವಾರ್ಡ್‌ಗಳಲ್ಲಿ ಶನಿವಾರ ನೀರು ಪೂರೈಕೆಯಾಗಲಿರುವ ಸ್ಥಳಗಳ ವಿವರ ಹೀಗಿದೆ.

ವಾರ್ಡ್ ನಂ. 7ರಲ್ಲಿ ಪುಲಿಕೇಶಿ ರಸ್ತೆ, ಆದಾರ ಗಲ್ಲಿ, ಬಾಗಲಕೋಟಿ, ಪಟ್ಟಣಶೆಟ್ಟರ ಲೈನ್, ಉಳಿದ ಭಾಗಗಳು, ವಾರ್ಡ್ ನಂ. 29ರಲ್ಲಿ ಚಂದಾವರಿ ಲೈನ್, ಡಂಬಳ ಅವರ ಲೈನ್, ಭಾಂಡಗೆ ಲೈನ್ ಉಳಿದ ಭಾಗಗಳು, ವಾರ್ಡ್ ನಂ.23, 20ರಲ್ಲಿ ಶರಣಪ್ಪರ ಲೈನ್, ನಾಗಪ್ಪನಕಟ್ಟಿ ಲೈನ್, ಪಾಟೀಲ ರಾಚೋಟೇಶ್ವರ ಗುಡಿಯ ಲೈನ್ ಮುಂದೆ, ಈಟಿಯಾರ ಲೈನ್, ಅಂಗನವಾಡಿ ಲೈನ್, ಶಾಂತವ್ವನ ಅಡ್ಡೆ ಉಳಿದ ಭಾಗಗಳು, ವಾರ್ಡ್ ನಂ. 22ರಲ್ಲಿ ಅಮರೇಶ್ವರ ನಗರ, ತಾಜ್ ನಗರ, ವಾರ್ಡ್ ನಂ. 26, 24, ಅಬ್ಬಿಗೇರಿ ಕಂಪೌಂಡ್, ಸಾಲಮನೆ, ತೆಗ್ಗಿನ ಲಾಟ್, ಉರ್ದುಶಾಲೆ, ಕಮ್ಮಾರ ಸಾಲ, ಮಕಾನ್ ಗಲ್ಲಿ, ಉಡಚಮ್ಮನ ಗುಡಿ ಲೈನ್, ವಾರ್ಡ್ ನಂ. 28ರಲ್ಲಿ ಪಂಚಾಕ್ಷರಿ ನಗರ 3 ಮತ್ತು 4ನೇ ಕ್ರಾಸ್‌ಗಳಲ್ಲಿ ನೀರು ಪೂರೈಕೆಯಾಗಲಿದೆ.

ಅವಳಿ ನಗರದ ಸಾರ್ವಜನಿಕರು ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮಾರ್ಚ್ 23ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

⁎ 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ । 13,528 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರು

# ಸಾವಿನ ದುಃಖದಲ್ಲೇ ಪರೀಕ್ಷೆ ಬರೆದ ವಿದ್ಯಾರ್ಥಿನಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಆರಂಭವಾಗಿದ್ದು, ಶುಕ್ರವಾರ ಪ್ರಥಮ ಭಾಷೆ ವಿಷಯ ಪರೀಕ್ಷೆಯಲ್ಲಿ 15,037 ವಿದ್ಯಾರ್ಥಿಗಳು ಹಾಜರಾಗಿದ್ದು, 296 ವಿದ್ಯಾರ್ಥಿಗಳು ಗೈರಾಗಿದ್ದಾರೆ.

ಪ್ರಥಮ ಭಾಷೆ ವಿಷಯಕ್ಕೆ ಸಂಬಂಧಿಸಿದಂತೆ ಗದಗ ಶಹರ ವ್ಯಾಪ್ತಿಯಲ್ಲಿ 2,601, ಗದಗ ಗ್ರಾಮೀಣ ವ್ಯಾಪ್ತಿಯಲ್ಲಿ 2,553, ಮುಂಡರಗಿ 2,022, ನರಗುಂದ 1,527, ರೋಣ 3,879 ಹಾಗೂ ಶಿರಹಟ್ಟಿ 2,751 ಸೇರಿ ಒಟ್ಟು 15,333 ವಿದ್ಯಾರ್ಥಿಗಳು ಹೆಸರು ನೋಂದಾಯಿಸಿಕೊಂಡಿದ್ದರು.

ಆ ಪೈಕಿ ಗದಗ ಶಹರ ವ್ಯಾಪ್ತಿಯಲ್ಲಿ 2,548, ಗದಗ ಗ್ರಾಮೀಣ ವ್ಯಾಪ್ತಿಯಲ್ಲಿ 2,515, ಮುಂಡರಗಿ 1,970, ನರಗುಂದ 1,515, ರೋಣ 3,784 ಹಾಗೂ ಶಿರಹಟ್ಟಿ 2,705 ಸೇರಿ ಒಟ್ಟು 15,037 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಇನ್ನುಳಿದಂತೆ 296 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಪರೀಕ್ಷೆಯಲ್ಲಿ ಯಾವುದೇ ಅಹಿತಕರ ಘಟನೆ ಮತ್ತು ಡಿಬಾರ್ ಆದ ಯಾವುದೇ ಪ್ರಕರಣಗಳು ದಾಖಲಾಗಿಲ್ಲ ಡಿಡಿಪಿಐ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಅಜ್ಜಿಯ ಸಾವಿನ ಶೋಕದ ನಡುವೆಯೂ ವಿದ್ಯಾರ್ಥಿನಿಯೊಬ್ಬಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎದುರಿಸಿದ ಘಟನೆ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಗ್ರಾಮದಲ್ಲಿ ನಡೆದಿದೆ. ಜಗದ್ಗುರು ತೋಂಟದಾರ್ಯ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿ ಜಲಜಾಕ್ಷಿ ಕಿಲಾರಿ ಅಜ್ಜಿಯ ಸಾವಿನ ದುಃಖದ ನಡುವೆಯೂ ಎಸ್‌ಎಸ್‌ಎಲ್‌ಸಿ ಕನ್ನಡ ಪರೀಕ್ಷೆ ಬರೆದ ವಿದ್ಯಾರ್ಥಿನಿಯಾಗಿದ್ದಾಳೆ.

ಶುಕ್ರವಾರ ಎಸ್‌ಎಸ್‌ಎಲ್‌ಸಿ ಕನ್ನಡ ವಿಷಯದ ಪರೀಕ್ಷೆ ಬರೆಯಲು ವಿದ್ಯಾರ್ಥಿನಿ ಜಲಜಾಕ್ಷಿ ಕಿಲಾರಿ ಸಿದ್ಧಳಾಗಿದ್ದಳು. ಆದರೆ, ವಿಧಿಯಾಟ ಬೇರೆಯೇ ಇತ್ತು. ವಿದ್ಯಾರ್ಥಿನಿಯ ಅಜ್ಜಿ ಗುರುವಾರ ರಾತ್ರಿಯೇ ನಿಧನರಾದರು. ಶುಕ್ರವಾರ ಬೆಳಿಗ್ಗೆ ಪರೀಕ್ಷೆ ಎದುರಿಸಲು ಸಂಪೂರ್ಣ ಸಿದ್ಧಳಾಗಿದ್ದ ವಿದ್ಯಾರ್ಥಿನಿ ದುಃಖದ ವಾತಾವರಣದಲ್ಲಿ ಪರೀಕ್ಷೆಗೆ ತೆರಳಲು ಹಿಂದೇಟು ಹಾಕಿದಾಗ, ಪಾಲಕರು, ಶಾಲೆಯ ಶಿಕ್ಷಕರು ಮತ್ತು ಅವಳ ಸಹಪಾಠಿಗಳು ಧೈರ್ಯ ತುಂಬಿದರು.

> ಶುಕ್ರವಾರ ಬೆಳಿಗ್ಗೆ ಮೃತ ಅಜ್ಜಿಗೆ ಪೂಜೆ ಸಲ್ಲಿಸಿ, ಪುಷ್ಪ ಸಮರ್ಪಿಸಿ ಆಶೀರ್ವಾದ ಪಡೆದುಕೊಂಡು ಶಾಲೆಗೆ ಆಗಮಿಸಿ ಪರೀಕ್ಷೆಯನ್ನು ಎದುರಿಸಿದ್ದಾಳೆ. ಶಿಕ್ಷಕಿಯರಾದ ಎ.ಬಿ. ಬೇವಿನಕಟ್ಟಿ, ಸಂಜೋತ ಸಂಕಣ್ಣವರ್, ಎಸ್.ಎಂ. ಹಂಚಿನಾಳ, ಬೂದಪ್ಪ ಅಂಗಡಿ, ಎಸ್.ಎಸ್. ತಿಮ್ಮಾಪುರ್, ಎಂ.ಎಂ. ಗೌಳೇರ ಸೇರಿದಂತೆ ಎಲ್ಲ ಶಿಕ್ಷಕರು ಪರೀಕ್ಷಾ ಕೊಠಡಿಗೆ ತೆರಳಿ ವಿದ್ಯಾರ್ಥಿನಿ ಜಲಜಾಕ್ಷಿ ಕಿಲಾರಿಗೆ ಧೈರ್ಯ ತುಂಬಿದರು.



ಪೊಲೀಸ್ ಅಧಿಕಾರಿಗಳೊಂದಿಗೆ ಎಸ್‌ಪಿ ಬಿ.ಎಸ್. ನೇಮಗೌಡ ಸಭೆ

# ಕಾನೂನು ಸುವ್ಯವಸ್ಥೆ ಕಾಪಾಡಲು ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲೆಯಾದ್ಯಂತ ಸಾರ್ವಜನಿಕ ಹಿತದೃಷ್ಟಿಯಿಂದ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಪೊಲೀಸ್ ಇಲಾಖೆಯ ವತಿಯಿಂದ ಅಗತ್ಯ ಕ್ರಮ ಕೈಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿ ಪೊಲೀಸ್ ಠಾಣೆಗೆ ಭೇಟಿ ನೀಡಿ, ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳ ಮೇಲೆ ತೀವ್ರ ನಿಗಾ ವಹಿಸಿ ಅದನ್ನು ತಡೆಗಟ್ಟುವುದಕ್ಕಾಗಿ ವಿಶೇಷ ತಂಡಗಳನ್ನು ರಚಿಸಲಾಗಿದೆ. ಇಂತಹ ಪ್ರಕರಣಗಳನ್ನು ತಡೆಗಟ್ಟುವುದಕ್ಕಾಗಿ ತಾಲೂಕಾ ಕೇಂದ್ರಗಳಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಹೆಚ್ಚು ಜನಸಂದಣಿ ಇರುವಂತಹ ಪ್ರದೇಶಗಳಲ್ಲಿ ಸಿಸಿ ಟಿವಿ ಅಳವಡಿಸಲು ಇಲಾಖೆ ಮುಂದಾಗಿದ್ದು, ಈ ಬಗ್ಗೆ ಎಲ್ಲ ಕಡೆಗಳಲ್ಲಿಯೂ ಸಹ ಜಾಗೃತಿ ಮೂಡಿಸಲಾಗುತ್ತಿದೆ. ಸಾರ್ವಜನಿಕರು ಇದರ ಬಗ್ಗೆ ಜಾಗೃತಿಯನ್ನು ವಹಿಸಬೇಕು. ಇದರಿಂದ ಪ್ರಾಪರ್ಟಿ ಅಫೆನ್ಸ್ ಕಡಿಮೆಯಾಗಲು ಸಹಕಾರಿಯಾಗಲಿದೆ ಎಂದರು.



ಇತ್ತೀಚೆಗೆ ಶಿರಹಟ್ಟಿ ಪಟ್ಟಣದಲ್ಲಿ ಒನ್ ಸೈಡ್ ಪಾರ್ಕಿಂಗ್ ವ್ಯವಸ್ಥೆಯನ್ನು ಜಾರಿ ಮಾಡಲಾಗಿದೆ. ಜೊತೆಗೆ ಸಂಶಯಾಸ್ಪದವಾಗಿ ಸಂಚರಿಸುವ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಡ್ರಿಂಕ್ ಅಂಡ್ ಡ್ರೈವ್ ಪ್ರಕರಣಗಳನ್ನು ದಾಖಲಿಸಿ ಅಪಘಾತ ಪ್ರಕರಣಗಳ ಸಂಖ್ಯೆ ಕಡಿಮೆ ಆಗುವಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಚನ್ನಯ್ಯ ದೇವೂರ, ಕ್ರೈಂ ಪಿಎಸ್‌ಐ ಶೇಖರ ಕಡಬಿನ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

> ಪ್ರತಿಯೊಬ್ಬ ಬೈಕ್ ಸವಾರರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಜೊತೆಗೆ ಸೈಬರ್ ಕ್ರೈಂ ಮತ್ತು ನಾರ್ಕೋಟಿಕ್ ಡ್ರಗ್ಸ್ ಬಗ್ಗೆಯೂ ಸಹ ಇಲಾಖೆ ವತಿಯಿಂದ ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ. ಸಾರ್ವಜನಿಕರು ಸೈಬರ್ ವಂಚನೆಗೆ ಒಳಗಾಗಬಾರದು. ಅನಾವಶ್ಯಕವಾಗಿ ತಮ್ಮ ವಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು. ಈ ಬಗ್ಗೆ ಹೆಚ್ಚು ಜಾಗೃತಿ ವಹಿಸುವುದು ಅವಶ್ಯವಿದೆ.
>
> **– ಬಿ.ಎಸ್. ನೇಮಗೌಡ.**
> **ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.**

ತಾಲೂಕಿನ 6 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎದುರಿಸಿದ ವಿದ್ಯಾರ್ಥಿಗಳು

## ಪಾರದರ್ಶಕ, ಯಶಸ್ವಿ ಪರೀಕ್ಷೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ವ್ಯಾಪ್ತಿಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಶುಕ್ರವಾರದಿಂದ ಪ್ರಾರಂಭವಾದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಅತ್ಯಂತ ಸುಗಮ, ಪಾರದರ್ಶಕ ಮತ್ತು ಯಶಸ್ವಿಯಾಗಿ ನಡೆದವು.

ಶುಕ್ರವಾರ ಬೆಳಿಗ್ಗೆ ಪಟ್ಟಣದ ಪರೀಕ್ಷಾ ಕೇಂದ್ರಗಳಿಗೆ ತಹಸೀಲ್ದಾರ ವಾಸುದೇವ ಸ್ವಾಮಿ ಮತ್ತು ತಾ.ಪಂ ಇ.ಓ. ಕೃಷ್ಣಪ್ಪ ಧರ್ಮರ ಮತ್ತು ಅಧಿಕಾರಿಗಳು ಆಗಮಿಸಿ ಪರೀಕ್ಷಾರ್ಥಿಗಳಿಗೆ ಹೂಗಳನ್ನು ನೀಡುವ ಮೂಲಕ ಶುಭಕೋರಿ, ವಿದ್ಯಾರ್ಥಿಗಳ ಬದುಕಿನಲ್ಲಿ ಎಸ್ಸೆಸ್ಸೆಲ್ಸಿ ಮಹತ್ವದ ಘಟ್ಟವಾಗಿದ್ದು, ಇಲ್ಲಿಂದಲೇ ವಿದ್ಯಾರ್ಥಿಯ ಭವಿಷ್ಯದ ಹಾದಿ ಸ್ಪಷ್ಟಗೊಳ್ಳುತ್ತದೆ. ಯಾವುದೇ ಗೊಂದಲಕ್ಕೆ ಮನಸ್ಸಿನಲ್ಲಿ ಜಾಗ ಕೊಡದೆ ಆತ್ಮವಿಶ್ವಾಸ, ಧೈರ್ಯ, ಸ್ಪಷ್ಟತೆ, ಸಂಯಮದಿಂದ ಪರೀಕ್ಷೆ ಬರೆಯಬೇಕು. ಇಡೀ ವರ್ಷದ ಓದು, ಪೂರ್ವ ಸಿದ್ಧತಾ ಪರೀಕ್ಷೆ, ಅಣಕು ಪರೀಕ್ಷೆಗಳಿಗೆ ಮಾಡಿಕೊಂಡ ತಯಾರಿಗಳನ್ನೆಲ್ಲ ಕಣ್ಮುಂದೆ ತಂದುಕೊಂಡು, ಓದಿರುವುದನ್ನೆಲ್ಲ ಪುನಃ ಮನನ ಮಾಡಿಕೊಂಡು ಪ್ರಶ್ನೆಗಳನ್ನು ಒಂದೊಂದಾಗಿ ಬಿಡಿಸಬೇಕು. ಪರೀಕ್ಷಾ ಸಮಯದಲ್ಲಿ ಪಾಲಕರು ಮಕ್ಕಳಿಗೆ ಮೃದು ದನಿಯಲ್ಲಿ ಪ್ರೀತಿಯಿಂದ ಸಲಹೆ- ಸೂಚನೆಗಳನ್ನು ನೀಡಬೇಕು. ಮೊಬೈಲ್, ಟಿವಿಗಳಿಂದ ದೂರವಿದ್ದು ಪರೀಕ್ಷೆಯತ್ತ ಚಿತ್ತ ಹರಿಸಬೇಕು. ಪರೀಕ್ಷೆಯನ್ನು ಹಿಂಸೆ ಎಂದು ಭಾವಿಸದೆ, ಖುಷಿಯಿಂದ ಪರಿಗಣಿಸಿದಾಗ ಮಾತ್ರವೇ ಯಶಸ್ಸನ್ನು ನಮ್ಮದಾಗಿಸಿಕೊಳ್ಳಲು ಸಾಧ್ಯ ಎಂದರು.

ಈ ವೇಳೆ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಬಿಆರ್‌ಸಿ ಈಶ್ವರ ಮೇಡ್ಲೇರಿ, ಉಮೇಶ ನೇಕಾರ, ಮುಖ್ಯೋಪಾಧ್ಯಾಯ ಜಿ.ಡಿ. ಲಮಾಣಿ, ಪಿ.ಕೆ. ಹೊನ್ನಿಕೊಪ್ಪ ಹಾಗೂ ಆಯಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಇದ್ದರು.

> ಸೋಮವಾರ ಕನ್ನಡ ಪತ್ರಿಕೆ ಪರೀಕೆಗೆ ಲಕ್ಷ್ಮೇಶ್ವರದ ಒಟ್ಟು 6 ಪರೀಕ್ಷಾ ಕೇಂದ್ರಗಳಲ್ಲಿನ ಒಟ್ಟು 1383 ವಿದ್ಯಾರ್ಥಿಗಳಲ್ಲಿ 1366 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಬಿಸಿಎನ್ ಪ್ರೌಢಶಾಲೆ, ಪಾರ್ವತಿ ಮಕ್ಕಳ ಬಳಗದ ಪ್ರೌಢಶಾಲೆ, ಉಮಾ ವಿದ್ಯಾಲಯ ಪ್ರೌಢಶಾಲೆ, ಸಮೀಪದ ಪು.ಬಡ್ನಿ ಸರಕಾರಿ ಪ್ರೌಢಶಾಲೆ, ಶಿಗ್ಲಿಯ ಎಸ್‌ಎಸ್‌ಕೆ ಪ್ರೌಢಶಾಲೆ, ಬಾಲೆಹೊಸೂರಿನ ಸರಕಾರಿ ಪ್ರೌಢಶಾಲೆ ಸೇರಿ ಒಟ್ಟು 6 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 17 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದು, ಪರೀಕ್ಷಾ ಸಮಯದಲ್ಲಿ ಯಾವುದೇ ನಕಲು ಪ್ರಕರಣಗಳು ನಡೆಯದೆ ಶಾಂತಿಯುತವಾಗಿ ಪರೀಕ್ಷೆಗಳು ನಡೆದವು. ಜಾಗೃತ ದಳದ ಅಧಿಕಾರಿಗಳು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಸದನದಲ್ಲಿ ಗದ್ದಲ: ಅಗೌರವ ತೋರಿದ 18 ಬಿಜೆಪಿ ಶಾಸಕರು 6 ತಿಂಗಳು ಅಮಾನತು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸದನದಲ್ಲಿ ಭಾರೀ ಗಲಾಟೆ, ಗದ್ದಲ ಎಬ್ಬಿಸಿದ್ದಲ್ಲದೆ ಸ್ಪೀಕರ್ ಪೀಠಕ್ಕೆ ಅಗೌರವ ತೋರಿದ ಆರೋಪದ ಮೇಲೆ 18 ಸದಸ್ಯರನ್ನು ಅಮಾನತು ಮಾಡಲಾಗಿದೆ. ಸ್ಪೀಕರ್ ಸ್ಥಾನದಲ್ಲಿ ಕುಳಿತ ಖಾದರ್ ನಿಮ್ಮನ್ನು ಕ್ಷಮಿಸಬಹುದು. ಆದರೆ ಸ್ಪೀಕರ್ ಪೀಠಕ್ಕೆ ಅಗೌರವ ತೋರಿದವರನ್ನು ಕ್ಷಮಿಸಲಾಗಲ್ಲ ಎಂದು ಪೀಠಕ್ಕೆ ಅಗೌರವ ತೆ-ೂರಿದ್ದಾರೆಂದು ವಿಧಾನಸಭೆ ಕಲಾಪದಿಂದ ಆರು ತಿಂಗಳು 18 ಸದಸ್ಯರನ್ನು ಅಮಾನತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದ್ದಾರೆ. ದೊಡ್ಡನಗೌಡ ಪಾಟೀಲ್, ಅಶ್ವಥ್ ನಾರಾಯಣ, ಎಸ್.ಆರ್ ವಿಶ್ವನಾಥ್, ಬೈರತಿ ಬಸವರಾಜು, ಎಂ.ಆರ್ ಪಾಟೀಲ್, ಚನ್ನಬಸಪ್ಪ, ಉಮಾನಾಥ್ ಕೋಟ್ಯನ್, ಸುರೇಶ್ ಗೌಡ, ಶೈಲೇಂದ್ರ ಬೆಲ್ದಾಳೆ, ಶರಣು ಸಲಗಾರ್, ಸಿಕೆ ರಾಮಮೂರ್ತಿ, ಯಶ್ಪಾಲ್ ಸುವರ್ಣ, ಹರಿಶ್ ಬಿ.ಪಿ, ಭರತ್ ಶೆಟ್ಟಿ, ಬಸವರಾಜ್ ಮತ್ತಿಮೂಡ್, ಧೀರಜ್ ಮುನಿರಾಜು, ಮುನಿರತ್ನ, ಚಂದ್ರು ಲಮಾಣಿ ಸೇರಿ 18 ಶಾಸಕರನ್ನು ಅಮಾನತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದರು. ಸ್ಪೀಕರ್ ರೂಲಿಂಗ್‌ಗೆ ವಿಪಕ್ಷ ಸದಸ್ಯರು ತೀವ್ರ ಖಂಡನೆ ವ್ಯಕ್ತಪಡಿಸಿದ್ದಾರೆ


ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಚಿವ ಎಚ್.ಕೆ. ಪಾಟೀಲರಿಂದ ಉದ್ಘಾಟನೆ

# ಸರ್ಕಾರಿ ನೌಕರರ ಕ್ರೀಡಾಕೂಟ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ 2024-25ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾರ್ಚ್ 22 ಮತ್ತು 23ರಂದು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮಾರ್ಚ್ 22ರಂದು ಬೆಳಿಗ್ಗೆ 10 ಗಂಟೆಗೆ ನೆರವೇರಿಸಲಾಗುವುದು. ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.



ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಆಗಮಿಸುವರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆಯ ಅಧ್ಯಕ್ಷರು ಹಾಗೂ ರಾಜ್ಯ ಹಿರಿಯ ಉಪಾಧ್ಯಕ್ಷರಾದ ಡಾ. ರವಿ ಗುಂಜೀಕರ್ ಸರ್ವರಿಗೂ ಸ್ವಾಗತ ಕೋರಿದ್ದಾರೆ.

> ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರಂದೀಪ್ ಡಿ, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಚೇತನ್ ಆರ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಆಗಮಿಸುವರು.

## ಸ್ವಾತಿ ಹತ್ಯೆ ಪ್ರಕರಣ: ಕುಟುಂಬಕ್ಕೆ ಸಾಂತ್ವನ ಹೇಳಿದ ಸಚಿವ ಶಿವಾನಂದ ಪಾಟೀಲ್!



■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಮಾಸೂರಿನ ಯುವತಿ ನರ್ಸ್ ಸ್ವಾತಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶುಕ್ರವಾರ ಸ್ವಾತಿ ಮನೆಗೆ ಸಚಿವ ಶಿವಾನಂದ ಪಾಟೀಲ್ ಭೇಟಿ ನೀಡಿದರು.

ಭೇಟಿ ವೇಳೆ ಸ್ವಾತಿ ಅವರ ತಾಯಿ ಶಶಿರೇಖಾ ಗೆ ಸಾಂತ್ವನ ಹೇಳಿದರು. ತಾಯಿ ಶಶಿರೇಖಾ ಅವರು, ಸಚಿವರು ಮನೆಗೆ ಬರ್ತಿದ್ದಂತೆ ಕಾಲಿಗೆ ಬಿದ್ದಿದ್ದು ನನ್ನ ಮಗಳ ಸಾವಿಗೆ ನ್ಯಾಯ ಕೊಡಿಸಿ ಅಂತ ಅಳಲು ತೋಡಿಕೊಂಡಿದ್ದಾರೆ. ಈ ವೇಳೆ ಶಶಿರೇಖಾ ಅವರಿಗೆ ಸಂತೈಸಿ ಅವರ ಕುಟುಂಬಸ್ಥರಿಗೆ ಸರ್ಕಾರದಿಂದ 5 ಲಕ್ಷ ಪರಿಹಾರದ ಚೆಕ್ ವಿತರಿಸಿದರು. ಜೊತೆಗೆ 1 ಲಕ್ಷ ರೂ. ವೈಯಕ್ತಿಕ ಪರಿಹಾರ ವಿತರಣೆ ಮಾಡಿದರು.

**ಘಟನೆ ಹಿನ್ನೆಲೆ**

ಇತ್ತೀಚೆಗೆ ಮಾಸೂರಿನ ಯುವತಿ ಸ್ವಾತಿ ಬರ್ಬರ ಹತ್ಯೆ ನಡೆದಿತ್ತು. ಇನ್ನೂ ಯುವತಿ ಸ್ವಾತಿ ಲವ್ ಜಿಹಾದ್‌ಗೆ ಬಲಿಯಾದಳಾ? ಹೀಗಂತ ಹಿಂದೂ ಪರ ಸಂಘಟನೆಗಳು ಸೇರಿದಂತೆ ಬಿಜೆಪಿ ನಾಯಕರು ಆರೋಪಿಸಿದ್ದಾರೆ. ಸದ್ಯ ಸ್ವಾತಿ ಹತ್ಯೆ ದೊಡ್ಡ ಸಂಚಲನ ಸೃಷ್ಟಿಸುತ್ತಲೇ ಪೊಲೀಸರ ತನಿಖೆ ಮತ್ತಷ್ಟು ತೀವ್ರಗೊಂಡಿದೆ.

## ಸದ್ಯಕ್ಕಿಲ್ಲ 2ನೇ ವಿಮಾನ ನಿಲ್ದಾಣ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರು ಮಹಾನಗರದ ಮುಂಬರುವ ಅಗತ್ಯಗಳನ್ನು ಗಮನದಟ್ಟುಕೊಂಡು 2ನೇ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ. ಈ ಕುರಿತು ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಎಂ.ಬಿ. ಪಾಟೀಲ್ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದರು.

### ಮಾರ್ಚ್ 24, ವಿಶ್ವ ಕ್ಷಯರೋಗ ದಿನಾಚರಣೆ ನಿಮಿತ್ತ ವಿಶೇಷ ಲೇಖನ

# 'ಟಿಬಿ ಸೋಲಿಸಿ ಕರ್ನಾಟಕ ಗೆಲ್ಲಿಸಿ'

ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಮಾರ್ಚ್ 24ರಂದು ವಿಶ್ವ ಕ್ಷಯರೋಗ ದಿನವನ್ನು ಆಚರಿಸಲಾಗುತ್ತಿದೆ. ಕ್ಷಯರೋಗವು ಮೈಕೋಬ್ಯಾಕ್ಟೀರಿಯಾದಿಂದ ಬರುತ್ತದೆ. ಹೆಚ್ಚಾಗಿ ಶ್ವಾಸಕೋಶಕ್ಕೆ ಹಾನಿ ಮಾಡುವ ಇದನ್ನು ಪಲ್ಮನರಿ ಕ್ಷಯರೋಗ ಎಂದು ಕರೆಯಲಾಗುತ್ತದೆ. ಮನುಕುಲವನ್ನು ಪ್ರಾಚೀನ ಕಾಲದಿಂದಲೂ ಕಾಡುತ್ತಿರುವ ಕ್ಷಯ(TB) ಸಾಂಕ್ರಾಮಿಕ ರೋಗವಾಗಿದ್ದು, ಇದರ ನಿರ್ಮೂಲನೆಗೆ ವಿಶ್ವ ಸಂಸ್ಥೆ ಶ್ರಮಿಸುತ್ತಿದೆ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ವಿಶ್ವ ಕ್ಷಯರೋಗ ದಿನವನ್ನು ಆಚರಿಸಲಾಗುತ್ತಿದೆ. 'ಟಿಬಿ ಸೋಲಿಸಿ ಕರ್ನಾಟಕ ಗೆಲ್ಲಿಸಿ' ಎಂಬ ಕಾರ್ಯಚಟುವಟಿಕೆಯೊಂದಿಗೆ ಸಮುದಾಯಕ್ಕೆ ಕ್ಷಯರೋಗದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿಶ್ವ ಕ್ಷಯರೋಗ ದಿನವನ್ನು ಆಚರಿಸುತ್ತಿದ್ದೇವೆ.

ಸಂಕ್ಷಿಪ್ತವಾಗಿ ಟಿಬಿ ಎಂದು ಕರೆಸಿಕೊಳ್ಳುವ ಕ್ಷಯರೋಗವು ಮೈಕೋಬ್ಯಾಕ್ಟೀರಿಯಂ ಟ್ಯೂಬರಕ್ಯೂಲೋಸಿಸ್ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುತ್ತದೆ. ಹೆಚ್ಚಾಗಿ ಶ್ವಾಸಕೋಶಕ್ಕೆ ಹಾನಿಮಾಡುವ ಕ್ಷಯರೋಗವೆಂದು ಕರೆಯಲಾಗುತ್ತಿದೆ. ದೇಹದ ಇತರೇ ಭಾಗಗಳಿಗೂ ಸಹ ಇದು ಹರಡುತ್ತದೆ. ಹೆಚ್‌ಐವ್ಹಿ/ಏಡ್ಸ್ ಹೊರತುಪಡಿಸಿದರೆ ಅತೀ ಹೆಚ್ಚು ಮಂದಿಯನ್ನು ಬಲಿ ತಗೆದುಕೊಳ್ಳುವ ಖಾಯಿಲೆಯಾಗಿದೆ.



ಜರ್ಮನ್‌ನ ರಾಬರ್ಟ್ ಕಾಕ್‌ಗೆ ಕ್ಷಯರೋಗ ಕಂಡುಹಿಡಿದ ಕೀರ್ತಿ ಸಲ್ಲುತ್ತದೆ. 1843ರಲ್ಲಿ ಗಣಿ ತಂತ್ರಜ್ಞರೊಬ್ಬರ ಮಗನಾಗಿ ಜನಿಸಿದ ರಾಬರ್ಟ್ ವೈದ್ಯಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವಾಗ ಅವರಿದ್ದ ಪ್ರದೇಶದಲ್ಲಿ ಕುರಿಗಳು ವಿಚಿತ್ರ ರೋಗದಿಂದ ಸಾಯಲಾರಂಭಿಸಿದವು. ರಾಬರ್ಟ್ ಕುರಿಗಳ ಗಲ್ಮವನ್ನು ಸೂಕ್ಷ್ಮದರ್ಶಕ ಯಂತ್ರದಲ್ಲಿ ಪರೀಕ್ಷಿಸಿದಾಗ ಕಲ್ಮೆಯಾಕಾರದ ಅಸಂಖ್ಯಾತ ಸೂಕ್ಷ್ಮಾಣು ವಿಭಜನೆಗೊಂಡು ವೃದ್ಧಿಯಾಗುತ್ತಿರುವುದನ್ನು ಗಮನಿಸಿ ಅದಕ್ಕೆ ಅಂಥ್ರಾಕ್ಸ್ ಬ್ಯಾಸಿಲ್ಲೈ ಎಂದು ನಾಮಕರಣ ಮಾಡಿದರು. 1882ರ ಮಾರ್ಚ್ 24ರಂದು ಬರ್ಲಿನ್ನಿನ ಫಿಜಿಯೋಲಾಜಿಕಲ್ ಸೊಸೈಟಿ ವತಿಯಿಂದ ನಡೆದ ವಿಜ್ಞಾನ ಗೋಷ್ಠಿಯಲ್ಲಿ ವಿಶಿಷ್ಟ ಬಗೆಯ ಕ್ರಿಮಿಯಿಂದ ಕ್ಷಯರೋಗ ಹರಡುತ್ತದೆ ಎಂದು ಪ್ರಯೋಗಸಮ್ಮತವಾಗಿ ಸಾಬೀತು ಮಾಡಿ ತೋರಿಸಿದರು. ರಾಬರ್ಟ್ ತಾವು ಕಂಡು ಹಿಡಿದ ಬ್ಯಾಕ್ಟೀರಿಯಾಕ್ಕೆ ಮೈಕೋಬ್ಯಾಕ್ಟೀರಿಯಂ ಟ್ಯೂಬರಕ್ಯೂಲೋಸಿಸ್ ಎಂದು ನಾಮಕರಣ ಮಡಿದರು.

ಶ್ವಾಸಕೋಶದ ಕ್ಷಯದಿಂದ ನರಳುವ ವ್ಯಕ್ತಿ ಕೆಮ್ಮಿದಾಗ, ಸೀನಿದಾಗ, ಉಗುಳಿದಾಗ ಹೊರಬರುವ ಸೂಕ್ಷ್ಮದ್ರವ ತುಂತುರುಗಳ ಮೂಲಕ ಸೂಕ್ಷ್ಮ ಜೀವಿಗಳು ಇನ್ನೊಬ್ಬನ ದೇಹಕ್ಕೆ ಸೇರಿ ಆರೋಗ್ಯವಂತ ವ್ಯಕ್ತಿಗೆ ಸೋಂಕು ತಗಲುತ್ತದೆ. ಮಕ್ಕಳಲ್ಲಿ, ಮದ್ಯವ್ಯಸನಿಗಳಲ್ಲಿ, ಹೆಚ್‌ಐವ್ಹಿ ಪೀಡಿತರಿಗೆ ಈ ರೋಗ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ವಿವೇಚನೆ ಇಲ್ಲದೇ ಎಲ್ಲೆಂದರಲ್ಲಿ ಉಗುಳುವುದು, ಸೀನುವುದು, ಬೀಡಿ-ಸಿಗರೇಟು, ಕುಡಿತ ಕೂಡಾ ಕ್ಷಯರೋಗಕ್ಕೆ ಪ್ರಮುಖ ಕಾರಣಗಳಾಗಿವೆ.

ಸಂಜೆ ವೇಳೆ ಜ್ವರ, ಎರಡು ವಾರ ಅಥವಾ ಅದಕ್ಕೂ ಹೆಚ್ಚಿನ ದಿನದಿಂದ ಕಫ ಸಹಿತ ಕೆಮ್ಮು, ಹಸಿವಿಲ್ಲದಿರುವುದು, ದೇಹದ ತೂಕ ಕಡಿಮೆಯಾಗುವುದು ಮುಂತಾದ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ. ನಿರಂತರ ವೈದ್ಯಕೀಯ ಚಿಕಿತ್ಸೆಯನ್ನು ಪಡೆದರೆ ಇದು ಸಂಪೂರ್ಣವಾಗಿ ಗುಣಪಡಿಸಬಹುದಾದ ಖಾಯಿಲೆಯಾಗಿದೆ.

ಜಿಲ್ಲಾ, ತಾಲೂಕು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಸಿಬಿನ್ಯಾಟ್ ಹಾಗೂ ಟ್ರೂನ್ಯಾಟ್ ಯಂತ್ರಗಳನ್ನು ನೀಡಿ ಅತೀ ಶೀಘ್ರವಾಗಿ ರೋಗಿಗಳಿಗೆ ಖಾಯಿಲೆಗಳ ತೀವ್ರತೆ ತಿಳಿಸಲಾಗುತ್ತಿದೆ. ಈ ವರ್ಷ ವಿಶೇಷವಾಗಿ ಡಿಸೆಂಬರ್ 7ರಿಂದ ಮಾರ್ಚ್ 17ರವರೆಗೆ 100 ದಿನಗಳ ಅಭಿಯಾನವನ್ನು ಹಮ್ಮಿಕೊಂಡಿದ್ದು, ಅದರಲ್ಲಿ ಡಯಾಬಿಟಿಕ್/ಹೆಚ್‌ಐವಿ/ಟಿಬಿ/ಪಿಡಿಯಾಕ್ಟ್ರಿಕ್/ಹೈ ರಿಸ್ಕ್ ಪಾಪೂಲೇಷನ್/ಮೈಗ್ರೇಶನ್ ಪಾಪೂಲೇಸನ್/ಡಯಾಲಿಸಿಸ್/ಗರ್ಭಿಣಿಯರು ಹಾಗೂ 60 ವರ್ಷ ಮೇಲ್ಪಟ್ಟ ಹಿರಿಯರಿಗೆ ಸರ್ವೆ ಕಾರ್ಯ ನಡೆಸಿ ಸಂಶಯಾಸ್ಪದ ರೋಗಿಗಳ ತಪಾಸಣೆ ಮಾಡಲಾಗಿದೆ.

ಕ್ಷಯ ಮುಕ್ತ ಭಾರತದ ಪರಿಕಲ್ಪನೆಯೊಂದಿಗೆ ಈ ಬಾರಿ ವಿಶೇಷವಾಗಿ ಗ್ರಾಮ ಪಂಚಾಯತಿಗಳನ್ನು ಟಿಬಿ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಿಸಲು ಜಿಲ್ಲಾ ಹಂತದಲ್ಲಿ ತಂಡ ರಚಿಸಿ ಅವುಗಳಿಂದ ಮೌಲ್ಯಮಾಪನ ಮಾಡಿಸಿ ಜಿಲ್ಲೆಯ ಒಟ್ಟು 124 ಗ್ರಾ.ಪಂಗಳಲ್ಲಿ 40 ಗ್ರಾ.ಪಂಗಳನ್ನು ಟಿಬಿಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಿಸಲು ನಾಮನಿರ್ದೇಶನಗೊಂಡಿವೆ. ಕ್ಷಯರೋಗದಿಂದ ಬಳಲುತ್ತಿರುವ ರೋಗಿಗಳಿಗೆ ಗ್ರಾ.ಪಂ ವತಿಯಿಂದ ಪೌಷ್ಠಿಕ ಆಹಾರ ಕಿಟ್‌ಗಳನ್ನು ನೀಡಲಾಗಿದೆ. ಕ್ಷಯರೋಗದಿಂದ ಬಳಲುತ್ತಿರುವ ಪ್ರತಿಯೊಬ್ಬ ರೋಗಿಗಳಿಗೆ ಪ್ರತಿ ತಿಂಗಳು 1 ಸಾವಿರ ರೂಗಳನ್ನು (ಚಿಕಿತ್ಸೆ ಮುಗಿಯುವವರೆಗೂ) ಪೌಷ್ಠಿಕ ಆಹಾರದ ಸಲುವಾಗಿ ಸರ್ಕಾರವು ಡಿಬಿಟಿ ಮೂಲಕ ನೇರವಾಗಿ ರೋಗಿಗಳ ಬ್ಯಾಂಕ್ ಖಾತೆಗೆ ಹಣ ಜಮಾ ಮಾಡಲಾಗುತ್ತಿದೆ.

ಪ್ರಧಾನಮಂತ್ರಿ ಟಿಬಿ ಮುಕ್ತ ಭಾರತ ಅಭಿಯಾನದಡಿಯಲ್ಲಿ (PMTBMBA) ಪ್ರತಿ ರೋಗಿಗಳಿಗೆ ದಾನಿಗಳಿಂದ ಆಹಾರದ ಕಿಟ್ (Food Kit)ಗಳನ್ನು ನೀಡುವಂತೆ ಮನವೊಲಿಸುತ್ತಿದ್ದು, ನಮ್ಮ ಜಿಲ್ಲೆಯಲ್ಲಿರುವ ಚುನಾಯಿತ ಪ್ರತಿನಿಧಿಗಳು/ಸರ್ಕಾರಿ ನೌಕರರು/ಎನ್‌ಜಿಒ ಹಾಗೂ ಸ್ವ-ಇಚ್ಛೆಯಿಂದ ಮುಂದೆ ಬಂದು ದಾನಿಗಳು ಟಿಬಿ ರೋಗಿಗಳನ್ನು ದತ್ತು ಪಡೆದು ಆಹಾರದ ಕಿಟ್ ನೀಡುತ್ತಿದ್ದಾರೆ.

**– ಡಾ. ಅರುಂಧತಿ ಕುಲಕರ್ಣಿ.**
**ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿಗಳು, ಗದಗ.**


### ಶೋಷಿತರ ಸಂಘರ್ಷ ದಿನಾಚರಣೆ ಕಾರ್ಯಕ್ರಮದಲ್ಲಿ ಎಸ್.ಎಸ್. ಪಟ್ಟಣಶೆಟ್ಟರ ಅಭಿಮತ

# ಡಾ. ಅಂಬೇಡ್ಕರರು ಆಧುನಿಕ ಅರ್ಥಶಾಸ್ತ್ರಜ್ಞರು

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರು ಜಾತಿ ವ್ಯವಸ್ಥೆಯನ್ನು ಈ ದೇಶದಿಂದ ಓಡಿಸಲು ಅನೇಕ ಹೋರಾಟಗಳನ್ನು ಮಾಡಿ, ಶೋಷಿತರಿಗೆ ನ್ಯಾಯ ಕೊಡಿಸುವಲ್ಲಿ ಶ್ರಮಿಸಿದರು ಎಂದು ತೋಂಟದಾರ್ಯ ಮಠದ ಆಡಳಿತಾಧಿಕಾರಿಗಳಾದ ಎಸ್.ಎಸ್. ಪಟ್ಟಣಶೆಟ್ಟರ ಹೇಳಿದರು.

ಪಟ್ಟಣದ ಲಯನ್ಸ್ ಕ್ಲಬ್ ಭವನದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ ವಾದ) ಜಿಲ್ಲಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಶೋಷಿತರ ಸಂಘರ್ಷ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.




ಡಿಎಸ್‌ಎಸ್ ರಾಜ್ಯ ಸಂಘಟನಾ ಸಂಚಾಲಕ ರಾಮಣ್ಣ ಕಲ್ಲದೇವನಹಳ್ಳಿ ಮಾತನಾಡಿ, ಅಂಬೇಡ್ಕರರು ಸಾವಿರಾರು ಜನರೊಂದಿಗೆ ಚೌಡಾರ ಕೆರೆ ಪ್ರವೇಶ ಮಾಡಿ ನೀರು ಮುಟ್ಟಿ ಕುಡಿದರು. ದಲಿತರಿಗೆ ಸ್ವಾಭಿಮಾನದಿಂದ ಬದುಕುಲು ಮೊದಲು ಅಡಿಯಿಟ್ಟ ಚಳುವಳಿ ಅದಾಗಿತ್ತು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಿ.ಎಸ್.ಎಸ್. ಜಿಲ್ಲಾ ಪ್ರಧಾನ ಸಂಚಾಲಕ ಬಾಲರಾಜ ಅರಬರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪೊಲೀಸ್ ಅಧಿಕಾರಿ ಡಿ.ವ್ಹಿ. ಪಾಟೀಲ, ಡಿ.ಎಸ್.ಎಸ್. ಮುಖಂಡರಾದ ಬಸವರಾಜ ಕಡೇಮನಿ, ಎಚ್.ಡಿ. ಪೂಜಾರ, ಆನಂದ ಶಿಂಗಾಡಿ, ಶರೀಫ ಬಿಳಿಯಲಿ, ನಗರಸಭೆ ಸದಸ್ಯರಾದ ಲಕ್ಷ್ಮವ್ವ ಭಜಂತ್ರಿ, ಪೂಜಾ ಬೇವೂರು, ನಾಗರಾಜ ಗೋಕಾವಿ, ಹನಮಂತ ಛಲವಾದಿ, ಮೋಹನ ಆಲ್ಮಲಕೇರ, ಸತೀಶ ಪಾಸಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಪ್ರಕಾಶ ಕಲ್ಲೆಕನವರ, ಮುತ್ತಪ್ಪ ಭಜಂತ್ರಿ, ಮಹಾಂತೇಶ ನಡಗೇರಿ, ಪ್ರೀತಿ ಡಂಬಳ, ಚೇತನ ಸೀತಾರಹಳ್ಳಿ, ಫಕ್ಕೀರಪ್ಪ ಮಾದರ, ಯಮನಪ್ಪ ಮೇಗಲಮನಿ, ಶಿವಾನಂದ ದೊಡ್ಡಮನಿ, ರಮೇಶ ಇಟಗಿ, ಪ್ರಮೋದ ಚಲವಾದಿ, ನೀಲಕಂಠ ಕುರಹಟ್ಟಿ, ಚಂದ್ರಶೇಖರ ಜಕ್ಕಮ್ಮನವರ, ಫಕ್ಕೀರೇಶ ಗುಡಿಸಲಮನಿ, ಎಂ.ಎನ್. ದೊಡ್ಡಮನಿ, ಸಂತೋಷ ಮ್ಯಾಗೇರಿ, ಸಂತೋಷ ಜಾಲಣ್ಣವರ, ಮಂಜುನಾಥ ಚಲವಾದಿ, ಹೊನ್ನಪ್ಪ ಸಾಕಿ, ಮಾರುತಿ ಅಂಗಡಿ, ಕೆಂಚಪ್ಪ ಮ್ಯಾಗೇರಿ, ರಮೇಶ ಚಲವಾದಿ, ಹನಮಂತ ಕಿರಟಗೇರಿ, ಯಲ್ಲಪ್ಪ ಭಜಂತ್ರಿ, ಬಸವರಾಜ ಚಲವಾದಿ, ಲಕ್ಷ್ಮಣ ವಡ್ಡರಕಲ್ಲ, ಪರಶುರಾಮ ಕಾಳೆ, ಅನಿಲ ಕಾಳೆ, ಕೊಟ್ರೇಶ ಜಕ್ಕಮ್ಮನವರ, ಲಕ್ಷ್ಮಣ ಭಜಂತ್ರಿ, ಪರಮೇಶ ಕಾಳೆ, ಬಸವರಾಜ ಕಪಲಿ, ಪ್ರಕಾಶ ಗಡ್ಡೆದವರ, ಫಕ್ಕಣ್ಣ ಭಜಂತ್ರಿ ಸೇರಿದಂತೆ ಡಿಎಸ್‌ಎಸ್ ಕಾರ್ಯಕರ್ತರು ಉಪಸ್ಥಿತರಿದ್ದರು. ಮುತ್ತು ಬಿಳೆಯಲಿ ನಿರೂಪಿಸಿದರು.

## ಶ್ರೀ ಶರಣ ಬಸವೇಶ್ವರರ ತೊಟ್ಟಿಲೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕಟ್ಟಿ ಬಸವೇಶ್ವರ ಸಮುದಾಯ ಭವನ ಟ್ರಸ್ಟ್ ಹಾಗೂ ಶ್ರೀ ಕಟ್ಟಿ ಬಸವೇಶ್ವರ ದೇವಸ್ಥಾನದ ಸಹಯೋಗದಲ್ಲಿ ಮಾರ್ಚ್ 16ರಿಂದ 30ರವರೆಗೆ ಶ್ರೀ ಮಹಾದಾಸೋಹಿ ಕಲಬುರಗಿ ಶರಣ ಬಸವೇಶ್ವರರ 47ನೇ ವರ್ಷದ ಪುರಾಣ ಪ್ರಾರಂಭೋತ್ಸವ ಧಾರ್ಮಿಕ ಸಮಾರಂಭ ಹಮ್ಮಿಕೊಂಡಿದ್ದು, ಇದರ ಅಂಗವಾಗಿ ಶ್ರೀ ಶರಣ ಬಸವೇಶ್ವರ ತೊಟ್ಟಿಲು ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ವೇ.ಮೂ. ಬಸಯ್ಯ ಶಾಸ್ತ್ರಿಗಳು ಹಿರೇಮಠ ಪ್ರವಚನ, ಜಗನ್ನಾಥ ಶಿಂದಗಿ ಸಂಗೀತ ಹಾಗೂ ಅಪ್ಪಣ್ಣ ಕುಡತಿನಿ ತಬಲಾ ಸೇವೆ ನೀಡಿದರು. ಶ್ರೀ ಕಟ್ಟಿ ಬಸವೇಶ್ವರ ಸಮುದಾಯ ಭವನ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನರಂಗಪ್ಪ ಹೂಗಾರ, ಶಂಭುಲಿಂಗಪ್ಪ ವಿ.ಕಾರದಕಟ್ಟಿ, ಭೀಮರೆಡ್ಡಿ ಕಿಲಬನವರ, ಸಂತೋಷ ಕುಡತರಕರ, ನರಸಿಂಹ ಕುಡತರಕರ, ಈಶ್ವರಪ್ಪ ಗಡಾದ, ನಿರ್ಮಲಾ ಕರಸಿದ್ದಿಮಠ, ನಾಗಪ್ಪ ಗಡಾದ, ಮುತ್ತು ಕಾರದಕಟ್ಟಿ, ಪುರಾಣ ಸಮಿತಿಯ ಅಧ್ಯಕ್ಷ ಮಾರುತಿ ಮದಗುಣಕಿ, ಉಪಾಧ್ಯಕ್ಷ ಶಿವನಗೌಡ ಆಡೂರ, ಕಿರಣ ಎಸ್.ಗಡಾದ, ಕಾರ್ಯದರ್ಶಿ ವೀರೇಂದ್ರ ಮಣ್ಣನವರ, ಕಾರ್ಯಕ್ರಮದ ಆಯೋಜಕ ಗಂಗಾಧರ ಗಡಾದ, ಶಂಕರ ಗಡಾದ ಹಾಗೂ ಸದ್ಭಕ್ತರು ಪಾಲ್ಗೊಂಡಿದ್ದರು.

## ಸುಗಮ ಪರೀಕ್ಷೆಗೆ ಸಕಲ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲೆಯ ಎಲ್ಲ ಎಸ್.ಎಸ್.ಎಲ್.ಸಿ ಪರೀಕ್ಷೆ-1ರ ಕೇಂದ್ರಗಳಲ್ಲಿ ಪರೀಕ್ಷೆಗಳು ಸುಗಮವಾಗಿ ಹಾಗೂ ಶಿಸ್ತಿನಿಂದ ನಡೆಯುವಂತೆ ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗಿದೆ. ಪರೀಕ್ಷೆಗಳು ಯಶಸ್ವಿಯಾಗಿ ಜರುಗಲು ಅಗತ್ಯ ವ್ಯವಸ್ಥೆಯನ್ನು ಎಲ್ಲಾ ಕೇಂದ್ರಗಳಲ್ಲಿ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ಒಟ್ಟು 61 ಪರೀಕ್ಷಾ ಕೇಂದ್ರಗಳಿದ್ದು, ಒಟ್ಟಾರೆ 16458 ಮಕ್ಕಳು ಪರೀಕ್ಷೆ ಬರೆಯಲಿದ್ದಾರೆ. ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಕೇಂದ್ರಗಳು ಇರುವುದಿಲ್ಲ. ರಾಜ್ಯ ಹಾಗೂ ಜಿಲ್ಲಾ ಹಂತದಿಂದ ವೀಕ್ಷಕರನ್ನು ನೇಮಿಸಲಾಗಿದೆ. 61 ಪರೀಕ್ಷಾ ಕೇಂದ್ರಗಳಿಗೆ ಪೊಲೀಸ್ ಭದ್ರತಾ ವ್ಯವಸ್ಥೆ, ಮಾರ್ಗಾಧಿಕಾರಿಗಳಿಗೆ ಮೂಡಿಸಲಾಗಿದೆ. ವಿದ್ಯಾರ್ಥಿಗಳ ಅನುಕೂಲತೆಗಳಿಗಾಗಿ ಸಾರಿಗೆ ಸೌಲಭ್ಯ, ಆರೋಗ್ಯ ಮತ್ತು ತುರ್ತು ವೈದ್ಯಕೀಯ ಸಹಾಯದ ವ್ಯವಸ್ಥೆ ಕೈಗೊಳ್ಳಲಾಗಿದೆ. ಒತ್ತಡ ರಹಿತ ವಾತಾವರಣದಲ್ಲಿ ಪರೀಕ್ಷೆ ಬರೆಯುವಂತೆ ವಿದ್ಯಾರ್ಥಿಗಳು ಹಾಗೂ ಪಾಲಕರಿಗೆ ಜಾಗೃತಿ ಮೂಡಿಸಲಾಗಿದೆ.

ಪರೀಕ್ಷೆಗಳು ಶಿಸ್ತಿನಿಂದ ನಡೆಯುವಂತೆ ಮೇಲ್ವಿಚಾರಣೆಗಾಗಿ ಸಿಟ್ಟಿಂಗ್ ಸ್ಕ್ವಾಡ್, ಫ್ಲೈಯಿಂಗ್ ಸ್ಕ್ವಾಡ್, ಮಾರ್ಗಾಧಿಕಾರಿಗಳು, ಕೊಠಡಿ ಮೇಲ್ವಿಚಾರಕರು ಹಾಗೂ ಮೊಬೈಲ್ ಸ್ವಾಧೀನ ಅಧಿಕಾರಿಗಳನ್ನು ನೇಮಿಸಿ ಅಗತ್ಯ ತರಬೇತಿ ನೀಡಲಾಗಿದೆ. ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಬೇರೆ ಸಿಬ್ಬಂದಿ / ಅಧಿಕಾರಿಗಳಿಗೆ ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ತಗೆದುಕೊಂಡು ಹೋಗಲು ಅವಕಾಶವಿರುವುದಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿ ಪ್ರತಿ ವಿದ್ಯಾರ್ಥಿಗಳಿಗೆ ಸೂಕ್ತ ಆಸನ (ಡೆಸ್ಕ್) ವ್ಯವಸ್ಥೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯ ವ್ಯವಸ್ಥೆ ಇರುವಂತೆ ನೋಡಿಕೊಳ್ಳುವಂತೆ ಅಧಿಕಾರಿಗಳು ಹಾಗೂ ಮುಖ್ಯ ಅಧೀಕ್ಷಕರಿಗೆ ಸಭೆ ಮಾಡಿ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

# ವಸ್ತುಗಳನ್ನು ಖರೀದಿಸುವಾಗ ಪರಿಶೀಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆಹಾರ ಸುರಕ್ಷತೆ ಮತು ತ್ತುಗುಣಮಟ್ಟ ಪ್ರಾಧಿಕಾರ, ವಾರ್ತಾ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮಹಾವಿದ್ಯಾಲಯದ ಎ.ಸಿ. ಆಡಿಟೋರಿಯಂ ಹಾಲ್‌ನಲ್ಲಿ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಜರುಗಿತು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗ್ರಾಹಕರು ಯಾವುದೇ ವಸ್ತುವನ್ನು ಖರೀದಿಸುವಾಗ ಅಥವಾ ಸೇವೆ ಪಡೆಯುವಾಗ ಪರಿಶೀಲನೆ ಮಾಡುವುದು ಅವಶ್ಯವಾಗಿದೆ. ಒಂದು ವೇಳೆ ವಸ್ತುವನ್ನು ಖರೀದಿಸಿದಾಗ ಮೋಸ ಹೋದಲ್ಲಿ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜಿ. ಮಾಲ್ದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿ ಪಾಟೀಲ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಜಿಮ್ಸ್ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಇದೇ ಸಂದರ್ಭದಲ್ಲಿ ತೂಕ ಮತ್ತು ಅಳತೆ ಮತ್ತು ಪೊಟ್ಟಣ ಸಾಮಗ್ರಿಗಳ ವಸ್ತು ಪ್ರದರ್ಶನ, ಆಹಾರ ಸುರಕ್ಷತೆ ಮತ್ತು ಆಹಾರ ಕಲಬೆರಕೆ ಕುರಿತು ಭಿತ್ತಿಚಿತ್ರ ಪ್ರದರ್ಶನ ಜರುಗಿತು.

## ಬಿಜೆಪಿ ಸಂಸ್ಕೃತಿಹೀನ ಪಕ್ಷ: DCM ಡಿ.ಕೆ. ಶಿವಕುಮಾರ್ ವಾಗ್ದಾಳಿ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿ ಸಂಸ್ಕೃತಿ ಹೀನ ಪಕ್ಷ. ಗೂಂಡಾಗಳಂತೆ ವರ್ತಿಸುತ್ತಿದ್ದಾರೆ ಎಂದು ಹೇಳುವ ಮೂಲಕ ಡಿಸಿಎಂ ಡಿ.ಕೆ. ಶಿವಕುಮಾರ್ ಹಿಗ್ಗಾಮುಗ್ಗಾ ವಾಗ್ದಾಳಿ ನಡೆಸಿದರು.ವಿಧಾನಸೌಧದಲ್ಲಿ ಮಾತನಾಡಿದ ಅವರು, "ಮುಖ್ಯಮಂತ್ರಿಗಳು ಹಾಗೂ ಗೃಹಮಂತ್ರಿಗಳು ಹನಿಟ್ರ್ಯಾಪ್ ವಿಚಾರವಾಗಿ ಹೇಳಿಕೆ ನೀಡಿದ್ದು, ಯಾರಾದರೂ ಒಬ್ಬರು ದೂರು ನೀಡಿದರೆ ಕ್ರಮ ತೆಗೆದುಕೊಳ್ಳಬಹುದು. ವಿಧಾನಸೌಧದಲ್ಲೇ ಅತ್ಯಾಚಾರ ಎಸಗಿದ್ದಾರೆ ಎಂದು ಸಂತ್ರಸ್ತೆಯೊಬ್ಬರು ದೂರಿನಲ್ಲಿ ಆರೋಪಿಸಿದ್ದಾರೆ.

# 50 ಶಾಸಕರನ್ನ ಸಸ್ಪೆಂಡ್ ಮಾಡಬೇಕಿತ್ತು: ಶಾಸಕ ಪ್ರದೀಪ್ ಈಶ್ವರ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸ್ಪೀಕರ್ ಪೀಠಕ್ಕೆ ಅಗೌರವ ತೋರಿದ 18 ಬಿಜೆಪಿ ಶಾಸಕರನ್ನು 6 ತಿಂಗಳು ಅಮಾನತು ಮಾಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಶಾಸಕ ಪ್ರದೀಪ್ ಈಶ್ವರ್ ಪ್ರತಿಕ್ರಿಯೆ ನೀಡಿದ್ದಾರೆ.

ಈ ಕುರಿತಂತೆ ವಿಧಾನಸೌಧದಲ್ಲಿ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್, ಬಿಜೆಪಿ ಶಾಸಕರು ಮಾಡಿರೋದಕ್ಕೆ 6 ತಿಂಗಳವರೆಗೆ ಅಮಾನತು



ಮಾಡಿರುವುದು ಸ್ಪೀಕರ್ ಸ್ಥಾನದ ಗೌರವ ಹೆಚ್ಚಿಸಿದೆ ಎಂದರು.

ಸ್ಪೀಕರ್ ಮೇಲೆ ಪೇಪರ್ ಎಸೆದರೆ ಸುಮ್ಮನಿರಬೇಕಾ? ಬಿಜೆಪಿಯವರಿಗೆ ನಮ್ ಜೊತೆ ಫೈಟ್ ಮಾಡೋಕೆ ಆಗ್ತಿಲ್ಲ. ಯಾವತ್ತಾದ್ರೂ ಬಡವರ ಕಷ್ಟ ಕೇಳಿದ್ದೀರಾ? ನಿಮಗೆ ಜನರ ಕಷ್ಟ ಬೇಕಾಗಿಲ್ಲ. ಯಾವ್ಯಾವುದೋ ವಿಷಯ ಇಟ್ಕೊಂಡಿದ್ದಾರೆ. ನಾನ್ ಏನಾದರೂ ಸ್ಪೀಕರ್ ಸ್ಥಾನದಲ್ಲಿದಿದ್ದರೆ 2 ವರ್ಷ ಸಸ್ಪೆಂಡ್ ಮಾಡ್ತಿದ್ದೆ. ಅಲ್ದೇ ಸ್ಪೀಕರ್ ಅವರು 50ಜನರನ್ನು ಅಮಾನತು ಮಾಡ್ತಾರೆ ಅಂದ್ಕೊಂಡಿದ್ದೆ. ಆದ್ರೆ ಸ್ಪೀಕರ್ 18 ಜನರನ್ನು ಮಾಡಿದ್ದಾರೆ. ಶಾಸಕರನ್ನ ಅಮಾನತು ಮಾಡಿರೋದು ಸರಿ ಇದೆ ಎಂದು ಪ್ರದೀಪ್ ಈಶ್ವರ್ ಸಮರ್ಥಿಸಿಕೊಂಡಿದ್ದಾರೆ.

## ಹೆಜ್ಜೇನು ದಾಳಿ: ಖಾಸಗಿ ಶಾಲೆಯ 9 ಸಿಬ್ಬಂದಿಗೆ ಗಾಯ, ಓರ್ವ ಮಹಿಳೆ ಗಂಭೀರ!

■ವಿಜಯಸಾಕ್ಷಿ ಸುದ್ದಿ, ಹಾಸನ

ಜಿಲ್ಲೆಯ ಸಕಲೇಶಪುರ ಪಟ್ಟಣದ ಲಕ್ಷ್ಮೀಪುರ ಬಡಾವಣೆಯಲ್ಲಿ ಖಾಸಗಿ ಶಾಲೆಯ ಸಿಬ್ಬಂದಿ ಮೇಲೆ ಹೆಜ್ಜೇನು ದಾಳಿ ನಡೆಸಿದ ಘಟನೆ ಜರುಗಿದೆ.

ಇನ್ನೂ ದಾಳಿಯಿಂದ ಸುಮಾರು 9 ಮಂದಿಗೆ ಗಾಯಗಳಾಗಿದ್ದು, ಓರ್ವ ಮಹಿಳೆಯ ಸ್ಥಿತಿ ಗಂಭೀರವಾಗಿದೆ. ರೋಟರಿ ಶಾಲೆಯ ಸಿಬ್ಬಂದಿ ಶಾಲೆ ಮುಗಿಸಿಕೊಂಡು, ಮನೆಗೆ ತೆರಳುವಾಗ ಹೆಜ್ಜೇನು ದಾಳಿ ಮಾಡಿದೆ. ಇನ್ನೂ ಶಾಲೆಯ ಎದುರಿಗೆ ಇರುವ ಮನೆಯ ಮುಂದೆ ನಿಂತಿದ್ದ ವರ್ಗೀಸ್ ಎಂಬವರ ಮೇಲೂ ಹೆಜ್ಜೇನು ದಾಳಿ ನಡೆಸಿದೆ.

ಹೆಜ್ಜೇನು ದಾಳಿಯಿಂದಾಗಿ ಕೋಮಲ ಎಂಬ ಮಹಿಳೆ ಸ್ಥಿತಿ ಗಂಭೀರವಾಗಿದೆ. ಉಳಿದಂತೆ ಭಾಸ್ಕರ್, ಸೋಮಶೇಖರ್, ರವಿ, ಚೈತನ್ಯ, ಸಂಜಯ್, ಅಕ್ಷಯ್ ಮತ್ತು ವಿಶ್ವನಾಥ್ ಹೆಜ್ಜೇನು ದಾಳಿಯಿಂದ ಗಾಯಗೊಂಡಿದ್ದು, ಸಕಲೇಶಪುರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## 18 ಜನ ಶಾಸಕರ ಅಮಾನತು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶುಕ್ರವಾರ ನಡೆದ ವಿಧಾನಸಭೆ ಅಧಿವೇಶನದಲ್ಲಿ ಬಿಜೆಪಿಯ 18 ಜನ ಶಾಸಕರನ್ನು 6 ತಿಂಗಳುಗಳ ಅವಧಿಗೆ ಸಸ್ಪೆಂಡ್ ಮಾಡಿ ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಆದೇಶ ಮಾಡಿದ್ದಾರೆ. ಸ್ಪೀಕರ್ ಪೀಠಕ್ಕೆ ಅವಮಾನ ತೋರಿದ ಕಾರಣಕ್ಕೆ ಬಿಜೆಪಿ ನಾಯಕರ ಮೇಲೆ ಈ ಕ್ರಮ ತೆಗೆದುಕೊಳ್ಳಲಾಗಿದೆ. ವಿಧಾನಸಭೆಯಲ್ಲಿ ಸ್ಪೀಕರ್ ಪೀಠಕ್ಕೆ ಅಗೌರವ ತೋರಿಸಿರುವುದು ಭಾರೀ ಚರ್ಚೆಗೆ ಕಾರಣವಾಗಿದೆ. ಇದರ ಬೆನ್ನಲ್ಲೇ ಸ್ಪೀಕರ್ ಕಠಿಣ ಕ್ರಮಕ್ಕೆ ಮುಂದಾಗಿದ್ದು, ಈ ರೀತಿ ಅಮಾನತು ಆಗಿರುವ ಸದಸ್ಯರನ್ನು ಸದನದಿಂದ ಹೊರ ನಡೆಯುವಂತೆ ಸೂಚನೆ ನೀಡಲಾಯಿತು.

### ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿಯ ಅಧ್ಯಕ್ಷ ಇಮ್ತಿಯಾಜ ಮಾನ್ವಿ ಆಗ್ರಹ

# ಸಮುದಾಯ ಭವನಗಳ ಬಾಡಿಗೆ ನಿಯಂತ್ರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಸೂಚನೆಯಂತೆ, ರಾಜ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸುತ್ತೋಲೆಯ ಪ್ರಕಾರ ಸರ್ಕಾರದಿಂದ ಅನುದಾನ ಪಡೆದು ನಿರ್ಮಿಸಲಾಗಿರುವ ಶಾದಿ ಮಹಲ್, ಸಮುದಾಯ ಭವನಗಳು ಬಡ ಅಲ್ಪಸಂಖ್ಯಾತರ ಕುಟುಂಬಗಳ ಮದುವೆ ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಕೈಗೆಟುಕುವ ದರದಲ್ಲಿ ಸಿಗುವ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬಾಡಿಗೆ ನಿಯಂತ್ರಣ ಸಮಿತಿಯನ್ನು ರಚನೆ ಮಾಡಬೇಕೆಂದು ಗದಗ ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಆಗ್ರಹಿಸಿದರು.

ಅವರು ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ರಾಜ್ಯದಲ್ಲಿ ವಾಸಿಸುತ್ತಿರುವ ಬಡ ಅಲ್ಪಸಂಖ್ಯಾತರ ಸಮುದಾಯದ ಮದುವೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಅನುಕೂಲವಾಗುವ ಉದ್ದೇಶದಿಂದ ರಾಜ್ಯ ಸರ್ಕಾರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮುಖಾಂತರ ಸಮುದಾಯ ಭವನಗಳನ್ನು ನಿರ್ಮಿಸುತ್ತಿದೆ. ಆದರೆ ಖಾಸಗಿ ಸಂಸ್ಥೆಗಳು ಬಡವರ ಮದುವೆ ಹಾಗೂ ಇನ್ನಿತರ ಸಮಾರಂಭಗಳಿಗೆ 30ರಿಂದ 40 ಸಾವಿರ ಬಾಡಿಗೆಯನ್ನು ಪಡೆಯುವ ಮೂಲಕ ಸರ್ಕಾರದ




ಆದೇಶವನ್ನು ಗಾಳಿಗೆ ತೂರಿದ್ದಾರೆ. ಸಮುದಾಯ ಭವನಗಳನ್ನು ನಿರ್ಮಿಸಲು ಅಲ್ಪಸಂಖ್ಯಾತರ ಹೆಸರಲ್ಲಿ ಅನುದಾನ ಪಡೆದುಕೊಳ್ಳುತ್ತಿರುವ ಖಾಸಗಿ ಸಂಸ್ಥೆಯವರು ಭವನಗಳ ನಿರ್ಮಾಣದ ನಂತರ ಮದುವೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ತಮ್ಮಗೆ ಮನಬಂದಂತೆ ವಸೂಲಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸರ್ಕಾರದ ಸುತ್ತೋಲೆ ಪ್ರಕಾರ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮುದಾಯ ಭವನಗಳ ಬಾಡಿಗೆ ನಿಯಂತ್ರಣ ಸಮಿತಿಗಳನ್ನು ರಚನೆ ಮಾಡುವ ಮೂಲಕ ಬಡ ಕುಟುಂಬಗಳ ಮದುವೆ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಯೋಗ್ಯ ದರದಲ್ಲಿ ಸಮುದಾಯ ಭವನಗಳನ್ನು ನೀಡಲು ಹಾಗೂ ಸಮುದಾಯ ಭವನಗಳನ್ನು ಪಡೆಯುವರು ಆನಲೈನ್ ಮೂಲಕ ಮುಂಗಡ ಕಾಯ್ದಿರಿಸುವಂತೆ ವ್ಯವಸ್ಥೆ ಮಾಡಬೇಕೆಂದು ನಿರ್ದೇಶನ ನೀಡಲಾಗಿದೆ. ಆದರೆ ಈವರೆಗೂ ಈ ಹಗಲು ದರೋಡೆಗೆ ಕಡಿವಾಣ ಬಿದ್ದಿಲ್ಲ ಎಂದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳಲ್ಲಿ ಸಿಗುವ ವಿವಿಧ ಯೋಜನೆಗಳ ಮಾಹಿತಿಯನ್ನು ವ್ಯಾಪಕವಾಗಿ ಪ್ರಚಾರ ಮಾಡುವಲ್ಲಿ ಅಧಿಕಾರಿಗಳಿಂದ ಆಗುತ್ತಿರುವ ನಿರ್ಲಕ್ಷ್ಯ ಖಂಡಿಸಿ ಮತ್ತು ಇನ್ನು ಹಲವಾರು ಬೇಡಿಕೆಗಳಿಗೆ ಆಗ್ರಹಿಸಿ ಗದಗ ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿಯ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಮೌಲಾನಾ ಆಜಾದ ಭವನದಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮುಂದೆ ಪ್ರತಿಭಟನೆ ನಡೆಸಲಾವುದೆಂದು ಎಚ್ಚರಿಸಿದರು.

ಸಮಿತಿಯ ಉಪಾಧ್ಯಕ್ಷ ಅಬ್ದುಲಕರೀಮ ಬಳಗಾನೂರ ಮಾತನಾಡಿ, ಅಲ್ಪಸಂಖ್ಯಾತರ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕವಾಗಿ ಅಭಿವೃದ್ಧಿ ಕಾಣಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಭಿವೃದ್ಧಿ ನಿಗಮದಿಂದ ಸಾಕಷ್ಟು ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಗದಗ ಜಿಲ್ಲೆಯ ಹಾಗೂ ಗದಗ-ಬೆಟಗೇರಿ ನಗರದಲ್ಲಿ ಸಾವಿರಾರು ಬಡ ಕುಟುಂಬಗಳು ಸರ್ಕಾರದ ಯೋಜನೆಗಳಿಂದ ವಂಚಿತರಾಗಿದ್ದಾರೆ. ಅಧಿಕಾರಿಗಳು ಕೂಡಲೇ ಇದನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರದ ಯೋಜನೆಗಳನ್ನು ಸರಿಯಾಗಿ ಅನುಷ್ಠಾಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಲ್ಪಸಂಖ್ಯಾತರ ಹೋರಾಟ ಸಮಿತಿಯ ಉಪಾಧ್ಯಕ್ಷ ಅಬ್ದುಲಕರೀಮ ಬಳಗಾನೂರ, ಕಾರ್ಯದರ್ಶಿ ಇಬ್ರಾಹಿಂ ಹಳ್ಳಿಕೇರಿ, ಸಮಿತಿ ಮುಖಂಡರಾದ ಮಹ್ಮದರಫೀಕ ಮದ್ದಿವಾಲೆ, ಮೆಹಬೂಬಸಾಬ ಬಳ್ಳಾರಿ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಬಾಬುಸಾಬ ಅಗಡಿ, ಖಾಜಾಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ ಉಪಸ್ಥಿತರಿದ್ದರು.

# ಶಿಸ್ತುಬದ್ಧರಾಗಿ ತರಬೇತಿ ಪಡೆದುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ಪ್ರಾದೇಶಿಕ ತರಬೇತಿ ಕೇಂದ್ರದಲ್ಲಿ ವಿಜಯನಗರ ಔದ್ಯೋಗಿಕ ಆರೋಗ್ಯ ಮತ್ತು ಕೈಗಾರಿಕಾ ಸುರಕ್ಷತಾ ಸಂಸ್ಥೆ ಬೆಂಗಳೂರು ಸಹಯೋಗದೊಂದಿಗೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ತಾಂತ್ರಿಕ ಸಿಬ್ಬಂದಿಗಳಿಗೆ ಪ್ರಥಮ ಚಿಕಿತ್ಸಾ ತರಬೇತಿ ಶಿಬಿರ ಆಯೋಜಿಸಲಾಗಿತ್ತು.




ಸಮಾರಂಭ ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಎಂ, ಪ್ರಥಮ ಚಿಕಿತ್ಸೆ ಸಂಸ್ಥೆಯ ಸಿಬ್ಬಂದಿಗಳಿಗೆ ಅತ್ಯವಶ್ಯವಾಗಿದೆ. ಘಟಕದಲ್ಲಿ ಕರ್ತವ್ಯ ನಿರ್ವಹಿಸುವಾಗ, ಯಾವುದೇ ಅವಘಡ ಉಂಟಾದಾಗ ಪ್ರಥಮ ಚಿಕಿತ್ಸೆ ನೀಡುವುದು ಅವಶ್ಯ. ಇಂತಹ ಸಂದರ್ಭದಲ್ಲಿ ನುರಿತ ಸಿಬ್ಬಂದಿಗಳಿಂದ ಪ್ರಥಮ ಚಿಕಿತ್ಸೆ ನೀಡುವಂತಾಗಲಿ ಎಂದು ಸಂಸ್ಥೆಯ ಎಲ್ಲ ಘಟಕಗಳ ತಾಂತ್ರಿಕ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗುತ್ತಿದೆ. ನೀವು ಶಿಸ್ತುಬದ್ಧರಾಗಿ ತರಬೇತಿ ಪಡೆದುಕೊಂಡು ನಿಮ್ಮ ನಿಮ್ಮ ಘಟಕಗಳಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ತರಬೇತುದಾರರಾಗಿ ಆಗಮಿಸಿದ್ದ ವಿಜಯನಗರ ಔದ್ಯೋಗಿಕ ಆರೋಗ್ಯ ಮತ್ತು ಕೈಗಾರಿಕಾ ಸುರಕ್ಷತಾ ಸಂಸ್ಥೆಯ ಪ್ರವೀಣ ಮಾತನಾಡಿ, ಪ್ರಥಮ ಚಿಕಿತ್ಸೆಯು ಕೆಲಸ ನಿರ್ವಹಿಸುವ ಸ್ಥಳದಲ್ಲಿ ಮಾತ್ರವಲ್ಲದೆ ಮನೆಗಳಲ್ಲಿ ಕೂಡ ಅವಶ್ಯಕವಾಗಿದೆ. ಪ್ರಥಮ ಚಿಕಿತ್ಸೆ ಕುಟುಂಬವನ್ನು ರಕ್ಷಣೆ ಮಾಡುತ್ತದೆ. ಇಂದು ಪ್ರಥಮ ಚಿಕಿತ್ಸೆಯ ಎಲ್ಲ ತಾಂತ್ರಿಕತೆಯ ಬಗೆಗಳನ್ನು ಹೇಳಿಕೊಡಲಾಗುತ್ತದೆ. ಸಂಸ್ಥೆಯ ಸಿಬ್ಬಂದಿಗಳು ಸಹ ಪ್ರಥಮ ಚಿಕಿತ್ಸೆ ನೀಡಲು ಶಕ್ತರಾಗಲಿ ಎಂದು ತರಬೇತಿ ಶಿಬಿರ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಶಿಬಿರದಲ್ಲಿ 09 ವಿಭಾಗಗಳ ಘಟಕ, ವಿಭಾಗೀಯ ಕಾರ್ಯಾಗಾರ ಹಾಗೂ ಪ್ರಾದೇಶಿಕ ಕಾರ್ಯಾಗಾರಗಳಿಂದ 55 ತಾಂತ್ರಿಕ ಸಿಬ್ಬಂದಿಗಳು ಪ್ರಥಮ ಚಿಕಿತ್ಸೆ ತರಬೇತಿ ಪಡೆದುಕೊಂಡರು. ವಿರೂಪಾಕ್ಷ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು. ನವೀನಕುಮಾರ ತಿಪ್ಪಾ ವಂದಿಸಿದರು.

## ರಸ್ತೆಯ ಗುಂಡಿ ಅವಾಂತರಕ್ಕೆ ಮುಕ್ತಿ ನೀಡಿ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿಯಿಂದ ನರಸಾಪೂರಕ್ಕೆ ಹೋಗುವ ಪಿ.ಬಿ. ರಸ್ತೆಗೆ ಹೊಂದಿಕೊಂಡಿರುವ ಹುಲಕೋಟಿ ಶಾಲೆಗೆ ಹೋಗುವ ಮಾರ್ಗದಲ್ಲಿ ಗುಂಡಿ ತೋಡಿ ಸುಮಾರು ಏಳು ತಿಂಗಳುಗಳಿಂದ ದುರಸ್ತಿ ಮಾಡದೇ ಹಾಗೆಯೇ ಬಿಟ್ಟಿರುವದರಿಂದ ನಿತ್ಯ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ನಿತ್ಯವೂ ಅಪಘಾತಗಳು ಸಂಭವಿಸುತ್ತಿವೆ ಎಂದು ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈಬಗ್ಗೆ ಈಗಾಗಲೇ ಎರಡು ಬಾರಿ ಜಿಲ್ಲಾಧಿಕಾರಿಗಳಿಗೆ, ಪೌರಾಯುಕ್ತರಿಗೆ, ಸಂಬಂಧಪಟ್ಟ ಅಧಿಕಾರಿಗಳಿಗೆ ಮೌಖಿಕವಾಗಿ ಹಾಗೂ ಲಿಖಿತವಾಗಿ ಮನವಿಯನ್ನು ಸಲ್ಲಿಸಿದರೂ ಯಾವುದೇ ಕ್ರಮ ಕೈಕೊಂಡಿಲ್ಲ.

ಜಿಲ್ಲಾಧಿಕಾರಿಗಳು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಅಗಿದ ಗುಂಡಿಗಳನ್ನು ಸರಿಪಡಿಸುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಿ, ಸೂಕ್ತ ಕ್ರಮ ಕೈಕೊಂಡು ಸುಗಮ ಸಂಚಾರಕ್ಕೆ ಮಾಡಿಕೊಡಬೇಕು ಎಂದು ಅವರು ಆಗ್ರಹಿಸಿದದಾರೆ.

## ಸಮಾಜಕ್ಕೆ ತಮ್ಮ ಕೊಡುಗೆ ನೀಡಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಉಳ್ಳವರು ಸ್ವಇಚ್ಛೆಯಿಂದ ಸಮಾಮುಖಿ ಕಾರ್ಯಗಳಲ್ಲಿ ತೊಡಗಿಕೊಂಡು ಬಡವರಗೆ ಸಹಾಯ ಮಾಡುವುದರೊಂದಿಗೆ ಸಮಾಜಕ್ಕೆ ತಮ್ಮ ಕೊಡುಗೆ ನೀಡಬೇಕು ಎಂದು ಇಮ್ತಿಯಾಜ್ ಢಾಲಾಯತ ಹೇಳಿದರು.

ಅವರು ಪಟ್ಟಣದ ಚಿಂದಿಪೇಟಿ ಓಣಿಯ ಇಮ್ತಿಯಾಜ್ ಢಾಲಾಯತ ಅವರ ತಂದೆ ಇಮಾಮಸಾಬ ಢಾಲಾಯತ ಇವರ ಸ್ಮರಣಾರ್ಥ ರಮಜಾನ್ ಹಬ್ಬದ ನಿಮಿತ್ತ ಬಡವರಿಗೆ ಸಹಾಯ ಧನ ನೀಡಿ ಮಾತನಾಡಿ, ರಂಜಾನ್ ಹಬ್ಬವು ಪವಿತ್ರವಾದ ಹಬ್ಬವಾಗಿದ್ದು, ಮುಸ್ಲಿಂ ಸಮಾಜ ಬಾಂಧವರು ಯಾವತ್ತು ತಮ್ಮ ದುಡಿಮೆಯಲ್ಲಿ ಬಡವರಿಗಾಗಿ ಸಹಾಯ ಧನ ನೀಡುತ್ತಿದ್ದಾರೆ. ಪ್ರತಿ ವರ್ಷ 21 ಬಡ ಕುಟುಂಬಕ್ಕೆ ಹಾಗೂ ಸಮಾಜಕ್ಕೆ ಸಾಧ್ಯವಾದ ದಾನ ನೀಡುವುದು ನಮ್ಮ ಧರ್ಮ ಎಂದರು.

ಈ ಸಂದರ್ಭದಲ್ಲಿ ದಾವಲಬಿ ಆಡಕಾವು, ರಜಿಯಾಬೇಗಂ ಢಾಲಾಯತ, ಎಂ.ಎಂ. ಮೇಗಲಮನಿ ಇದ್ದರು.

### ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ)

# ಪ್ರಧಾನ ಸಂಚಾಲಕರಾಗಿ ಬಾಲರಾಜ್ ಅರಬರ ಪುನರಾಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ರಾಜ್ಯ ಸಮಿತಿಯ ಆದೇಶದಂತೆ ಗದಗ ಜಿಲ್ಲಾ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಜಿಲ್ಲಾ ಸರ್ವ ಸದಸ್ಯರ ಸಭೆಯನ್ನು ರಾಜ್ಯ ಸಂಘಟನೆಯ ಸಂಚಾಲಕರಾದ ರಾಮಣ್ಣ ದೇವನಹಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆಸಿ, ಜಿಲ್ಲಾ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.



ಜಿಲ್ಲಾ ಪ್ರಧಾನ ಸಂಚಾಲಕರಾಗಿ ಬಾಲರಾಜ ಅರಬರ ಪುನರಾಯ್ಕೆಯಾದರು. ಜಿಲ್ಲಾ ಸಂಘಟನಾ ಸಂಚಾಲಕರಾಗಿ ನಾಗರಾಜ ಗೋಕಾವಿ, ಮಹಿಳಾ ಘಟಕದ ಸಂಚಾಲಕರಾಗಿ ಪೂಜಾ ಬೇವೂರು, ಸಂಘಟನಾ ಸಂಚಾಲಕರಾಗಿ ಪ್ರೀತಿ ಡಂಬಳ, ಚೇತನ ಸೀತಾರಹಳ್ಳಿ ಆಯ್ಕೆಯಾದರು. ರೋಣ ತಾಲೂಕಾ ಸಂಚಾಲಕರಾಗಿ ಹನುಮಂತ ಚಲವಾದಿ, ನರಗುಂದ ತಾಲೂಕಾ ಸಂಚಾಲಕರಾಗಿ ಪ್ರಕಾಶ್ ಕಲ್ಲೆಕ್ಕನವರ, ಸಂಚಾಲಕರಾಗಿ ಮಹೇಶ ಮಾದರ ಪುನರಾಯ್ಕೆಯಾದರು.

ಈ ಸಂದರ್ಭದಲ್ಲಿ ಮರಿಯಪ್ಪ ನಡಿಗೇರಿ, ಕೆಂಚಪ್ಪ ಮ್ಯಾಗೇರಿ, ಮಾಂತೇಶ್ ನಡೇಗೇರಿ, ಪ್ರಕಾಶ್ ಗಡದವರು, ಕೊಟ್ರೇಶ್ ಜಕ್ಕಮ್ಮನವರು, ಚಂದ್ರು ಜಕ್ಕಮ್ಮನವರು, ಸಂತೋಷ್ ಜಾಲಣ್ಣವರು, ಕುಮಾರ್ ಕಮತರ ಮುಂತಾದವರು ಉಪಸ್ಥಿತರಿದ್ದರು.

### ಪ್ರಕಟಣೆಯಲ್ಲಿ ಜಾತ್ರಾ ಸಮಿತಿ ಅಧ್ಯಕ್ಷ ವೀರಣ್ಣ ಮುಗದ ಮಾಹಿತಿ

# ನಿಡಗುಂದಿ ಶ್ರೀ ವೀರಭದ್ರೇಶ್ವರ ಜಾತ್ರೆ ಮಾ. 22ರಿಂದ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿ ಗ್ರಾಮದ ಶ್ರೀ ವೀರಭದ್ರೇಶ್ವರ ಜಾತ್ರೆಯು ಮಾ.22ರಿಂದ 30ರವರೆಗೆ ಜರುಗಲಿದೆ ಎಂದು ಅಧ್ಯಕ್ಷ ವೀರಣ್ಣ ಮುಗದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಾತ್ರಾ ಮಹೋತ್ಸವದ ನಿಮಿತ್ತ ಮಾ.22ರಿಂದ 30ರವರೆಗೆ ನಿತ್ಯ ಸಂಜೆ 7ಕ್ಕೆ ನರೇಗಲ್ಲದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರಿಂದ ಪುರಾಣ ಪ್ರವಚನ ಜರುಗಲಿದೆ.

ಮಾ.22ರ ಸಂಜೆ 6ಕ್ಕೆ ಜಾತ್ರಾ ಮಹೋತ್ಸವದ ಉದ್ಘಾಟನೆ ಜರುಗಲಿದ್ದು, ದಿವ್ಯ ಸಾನ್ನಿಧ್ಯವನ್ನು ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ವಹಿಸಲಿದ್ದಾರೆ. ಧರ್ಮರ ಮಠದ ಶ್ರೀ ಷಣ್ಮುಖಪ್ಪಜ್ಜನವರು ಸಮ್ಮುಖ ವಹಿಸಲಿದ್ದಾರೆ, ಗ್ರಾ.ಪಂ ಅಧ್ಯಕ್ಷೆ ಗೀತಾ ಕುಕನೂರ, ನಿವೃತ್ತ ಶಿಕ್ಷಕರಾದ ಪಿ.ಕೆ. ಕರಡಿ, ಬಾಳಪ್ಪ ಹೊಟ್ಟಿನ, ವಿ.ವಿ. ಲಗುಬಗಿ, ಪರಪ್ಪ ಅಣಗೌಡ್ರ ಮತ್ತು ಎಚ್. ಎಸ್. ಕೊಪ್ಪದ ಅತಿಥಿಗಳಾಗಿ ಪಾಲ್ಗೊಳ್ಳುವರು.

ಮಾ. 23ರಂದು ಎಸ್. ಎಸ್. ಪಾಟೀಲ, ವಿ.ಎ. ಕಂಬಳಿ, ಕೆ.ಜಿ. ಅರಮನಿ, ಎಸ್.ಎ. ಹೊಟ್ಟಿನ ಮತ್ತು ವಿ.ಕೆ. ಅರಮನಿ ಅತಿಥಿಗಳಾಗಿ ಆಗಮಿಸಲಿದ್ದಾರೆ. ಮಾ. 24ರಂದು ರೋಣ ಬೂದೀಶ್ವರ ಮಠದ ಡಾ. ವಿಶ್ವನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಅಡಿವೆಪ್ಪ ಪಲ್ಲೇದ, ಎಸ್.ಜಿ. ರೊಟ್ಟಿಗವಾಡ, ವಿ.ಬಿ. ಹೊಟ್ಟಿನ, ಎಸ್. ಎಲ್. ಜಂಗಣ್ಣವರ, ಎಸ್.ವಿ. ಮೇಟಿ, ವಿ.ಎಸ್. ಪಾಟೀಲ ಅತಿಥಿಗಳಾಗಿ ಪಾಲ್ಗೊಳ್ಳುವರು.

ಮಾ. 25ರಂದು ಶ್ರೀ ವೀರಭದ್ರೇಶ್ವರರ ವಿವಾಹ ಮಹೋತ್ಸವ ರಾತ್ರಿ 8ಕ್ಕೆ ಜರುಗಲಿದ್ದು, ಬಿ.ಎಸ್. ಅಣಗೌಡ್ರ, ಮಲ್ಲಮ್ಮ ಬಿಚ್ಚೂರ, ಮಂಜುಳಾ ಅರಮನಿ, ಪ್ರೇಮಾ ಕಮ್ಮಾರ, ಅನ್ನಪೂರ್ಣಾ ಗೆದಗೇರಿ, ವಿ.ಪಿ. ಡುಮ್ಮನವರ, ಸುಮಂಗಲಾ ಸೆಬಗೊಂಡ, ರೇಣವ್ವ ಬಾಗಲಿ, ಪಿ.ಬಿ. ಅಣಗೌಡ್ರ, ಎಸ್.ಎಸ್. ಅರಮನಿ, ಪೀರವ್ವ ನದಾಫ್ ಪಾಲ್ಗೊಳ್ಳುವರು.

ಮಾ. 26ರಂದು ಹಾವೇರಿಯ ಶ್ರೀ ಸದಾಶಿವ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಪ್ರಭು ಭೂಸನೂರಮಠ, ಎಂ.ಬಿ. ಹಂಗರಗಿ, ಎಸ್.ಸಿ. ಹಿರೇಮಠ, ಎಂ.ವಿ. ಪಾಟೀಲ, ಬಿ.ಕೆ. ಅಣಗೌಡ್ರ, ಬಿ.ಜಿ ಅರಮನಿ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಮಾ. 27ರಂದು ವಿ.ಆರ್. ಗೆದಗೇರಿ, ಎಸ್.ಎಂ. ಮುಗದ, ಬಿ.ಕೆ. ಅಣಗೌಡ್ರ, ಕೆ.ವಿ. ಅಣಗೌಡ್ರ, ಶಿವಪ್ಪ ಕಂಬಳಿ, ಸುರೇಶ ಪರಮಣ್ಣವರ, ಎಸ್. ಕೆ. ಹೊಟ್ಟಿನ, ಮಾ. 28ರಂದು ಎಮ್. ಎಮ್. ಸರ್ವಿ, ಎಸ್.ಕೆ. ಬಾಗಲಿ, ಬಿ.ಎ. ಹಿರೇಮನಿ, ಎ.ಎಸ್. ಅಣಗೌಡ್ರ, ಬಿ.ಎ. ಹಿರೇಮನಿ, ಡಿ.ಡಿ. ಕಮ್ಮಾರ, ಪಿ.ಆರ್. ಪಾಟೀಲ, ವಿ.ವಿ. ಪರಮಣ್ಣವರ ಪಾಲ್ಗೊಳ್ಳಲಿದ್ದಾರೆ.

ಮಾ. 29ರಂದು ಗುರು - ಲಿಂಗ-ಜಂಗಮರ ಪಾದಪೂಜೆ ಮಹಾಗಣಾರಾಧನೆ ಜರುಗುವುದು. ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಜಗದೀಶ ಕರಡಿ, ಡಾ. ವಿಕಾಸ ವೈದ್ಯ, ವಿ.ಎಸ್. ಮುಗದ, ವಿ.ಬಿ. ಪರಮಣ್ಣವರ, ರಮೇಶ ಅಣಗೌಡ್ರ ಅತಿಥಿಗಳಾಗಿ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

ಮಾ. 30ರ ಬೆಳಿಗ್ಗೆ 8ಕ್ಕೆ ಶ್ರೀ ವೀರಭದ್ರೇಶ್ವರರ ಮಹಾಗುಗ್ಗಳ, ಸಂಜೆ 6ಕ್ಕೆ ಅಭಿನವ ಚನ್ನಬಸವ ಸ್ವಾಮೀಜಿಗಳ ನೇತೃತ್ವದಲ್ಲಿ ಮಹಾರಥೋತ್ಸವ ಜರುಗುವುದು. ಸಂಜೆ 7ಕ್ಕೆ ಜರುಗುವ ಧಾರ್ಮಿಕ ಸಭೆಯಲ್ಲಿ ಶಿವಾನಂದ ಮಠದ, ರಂಜಣಗಿ ಸಹೋದರರು ಉಪಸ್ಥಿತರಿದ್ದು, ಶರಣಪ್ಪ ವಡಗೇರಿಯವರ ಜಾನಪದ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

### ಜಿಲ್ಲಾ ಆಡಳಿತ ಸಭಾಭವನದಲ್ಲಿ ಮಾರ್ಚ್ 24ರಂದು ಕಾರ್ಯಕ್ರಮ

# ವಿಶ್ವ ಕ್ಷಯರೋಗ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಜಿಲ್ಲಾ ವಾರ್ತಾ ಇಲಾಖೆ, ಜಿಲ್ಲಾ ಆಸ್ಪತ್ರೆ, ಗದಗ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯ ಐ.ಎಮ್.ಎ ಗದಗ, ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜ, ಗಾಂಧೀಜಿ ಪ್ಯಾರಾ ಮೆಡಿಕಲ್ ಕಾಲೇಜು, ಪಾಲನ್ ಗಾಲಾ ನರ್ಸಿಂಗ್ ಕಾಲೇಜ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಕ್ಷಯರೋಗ ದಿನಾಚರಣೆ-2025ನ್ನು ನಗರದ ಜಿಲ್ಲಾ ಆಡಳಿತ ಸಭಾಭವನದಲ್ಲಿ ಮಾರ್ಚ್ 24ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.


ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದರುಗಳಾದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ ಆಗಮಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಅರುಂಧತಿ ಕುಲಕರ್ಣಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಆಗಮಿಸುವರು. ಅತಿಥಿ ಉಪನ್ಯಾಸಕರಾಗಿ ಡಾ. ಅರವಿಂದ ಕರಿನಾಗಣ್ಣವರ ಆಗಮಿಸುವರು.

## ನಿಮ್ಮ ಮೇಲೆ ನಂಬಿಕೆಯಿಟ್ಟು ಪರೀಕ್ಷೆ ಬರೆಯಿರಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಲು ಸಭಾಪತಿ ಬಸವರಾಜ ಹೊರಟ್ಟಿಯವರು ಕೆಲ ಕಿವಿ ಮಾತುಗಳನ್ನು ಹೇಳುವ ಮೂಲಕ, ನಿಮ್ಮ ಮೇಲೆ ನಂಬಿಕೆಯಿಟ್ಟು ಪರೀಕ್ಷೆ ಬರೆದು ವಿಜಯಿಗಳಾಗಿ ಎಂದು ಶುಭ ಹಾರೈಸಿದ್ದಾರೆ.

ನಿಮ್ಮ ಬದುಕಿನ ಮಹತ್ವಪೂರ್ಣಘಟ್ಟ, 21-03-2025ರಿಂದ ನಡೆಯುವ ವಾರ್ಷಿಕ ಪರೀಕ್ಷಾ ತಯಾರಿಯ ಅಂತಿಮ ಹಂತದಲ್ಲಿದ್ದೀರಿ. ವರ್ಷವಿಡೀ ಓದಿದ ಜ್ಞಾನವನ್ನು ಒರೆಗೆ ಹಚ್ಚುವ ಸಂದರ್ಭವಿದು. ಶಾಲೆಗಳಲ್ಲಿ ನಿಮ್ಮ ಗುರುಗಳ ಪಾಠಗಳು, ತಂದೆ-ತಾಯಿಯರ ಕಾಳಜಿ, ಇಲಾಖೆಯ ಎಲ್ಲಾ ಅಧಿಕಾರಿಗಳ ಮಾರ್ಗದರ್ಶನ, ನಿಮ್ಮೆಲ್ಲ ಪ್ರಯತ್ನಕ್ಕೆ ಫಲ ಸ್ವೀಕರಿಸುವ ಕಾಲ ಸನ್ನಿಹಿತವಾಗಿದೆ. ಭಯಪಡದೆ ಪರೀಕ್ಷೆ ಎದುರಿಸಿ. ಪರೀಕ್ಷೆ ಇರುವುದು ನಿಮ್ಮ ಪ್ರಯತ್ನಕ್ಕೆ ಹೊರತು ಜೀವನಕ್ಕಲ್ಲ.

ರಾಜ್ಯದ ಶಾಲೆಗಳು ಕಲಿಕೆಗೆ ಪೂರಕವಾದ ಮೂಲಭೂತ ಸೌಲಭ್ಯಗಳಲ್ಲಿ ಅನೇಕ ಶಾಲಾ ನೂತನ ಕಟ್ಟಡಗಳು, ಬೋಧನೆಗೆ ಅವಶ್ಯಕವಾಗಿರುವ ಹೆಚ್ಚುವರಿ ಕೊಠಡಿಗಳು, ಗ್ರಂಥಾಲಯಗಳು, ಪ್ರಯೋಗಾಲಯಗಳು, ಡಿಜಿಟಲ್ ಕೊಠಡಿಗಳು, ಶುದ್ಧ ಕುಡಿಯುವ ನೀರು, ಆಟದ ಮೈದಾನಗಳುಎಲ್ಲಾ ಸೌಲಭ್ಯಗಳನ್ನು ಹೊಂದಿ ಸದಾ ಕ್ರಿಯಾಶೀಲವಾಗಿವೆ ಎಂಬುದು ಹೆಮ್ಮೆಯ ಸಂಗತಿ. ಎಲ್ಲಾ ಅನುಕೂಲಗಳೊಂದಿಗೆ ಗುಣಮಟ್ಟದ ಶಿಕ್ಷಣ ಪಡೆದ ನೀವು ಜಾಗತಿಕ ರಂಗದಲ್ಲಿ ಬದುಕು ಕಟ್ಟಿಕೊಳ್ಳಬೇಕೆಂಬುದು ನಮ್ಮ ಮಹದಾಸೆಯಾಗಿದೆ ಎಂದು ತಿಳಿಸಿದ್ದಾರೆ.

## ಪ್ರವಾಸಿಗರ ಗಮನಕ್ಕೆ: 1 ತಿಂಗಳು ನಂದಿ ಬೆಟ್ಟದ ರಸ್ತೆ ಬಂದ್!

■ ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

ಒಂದು ತಿಂಗಳು ನಂದಿಬೆಟ್ಟದ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಆದೇಶ ಮಾಡಿದ್ದಾರೆ. ವಿಶ್ವವಿಖ್ಯಾತ ನಂದಿಗಿರಿಧಾಮದ ರಸ್ತೆ ನವೀಕರಣ ಕಾಮಗಾರಿ ಹಿನ್ನಲೆಯಲ್ಲಿ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ.

ಹಾಗೆ ವಾರಾಂತ್ಯದ ದಿನಗಳಲ್ಲಿ ಶುಕ್ರವಾರ ಸಂಜೆ 6:30ರಿಂದ ಸೋಮವಾರ ಬೆಳಿಗ್ಗೆ 08 ಗಂಟೆ ವರೆಗೆ ಮಾತ್ರ ವಾಹನಗಳ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗಿದೆ.

ಉಳಿದಂತೆ ವಾರದ ಐದೂ ದಿನಗಳು ವಾಹನಗಳ ಸಂಚಾರಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ. ಮಾರ್ಚ್ 24 ರಿಂದ ಎಪ್ರಿಲ್ 25ರವರೆಗೂ 1 ತಿಂಗಳು ಅಂದರೆ 4 ವಾರಗಳ ಕಾಲ ನಿರ್ಬಂಧ ಇರಲಿದೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಹೆಣ್ಣುಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಹೆಣ್ಣು ಮಕ್ಕಳಿಗೆ ಸಮಾನವಾದ ಅವಕಾಶವನ್ನು ಮೊದಲು ನೀಡಿದವರು ಬಸವಾದಿ ಶರಣರು. ಗಂಡು ಹೆಣ್ಣು ಬೇಧವಿಲ್ಲದೆ ವರ್ಣಬೇಧ, ವರ್ಗಬೇಧ ಮಾಡದೇ ಹೆಣ್ಣುಮಕ್ಕಳಿಗೂ ವಿದ್ಯೆ, ಸಂಸ್ಕಾರ ಕಲ್ಪಿಸಿಕೊಟ್ಟವರು ಶರಣರು. ಮಹಿಳೆಯರಲ್ಲಿ ಒಂದು ವಿಶಿಷ್ಠ ಶಕ್ತಿಯಿದೆ, ಸಾಮರ್ಥ್ಯವಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2737ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹೆಣ್ಣುಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಬೇಕು, ಬೆಳೆಸಬೇಕು, ಪ್ರೋತ್ಸಾಹಿಸಬೇಕು. ಸರಿಯಾದ ವಿದ್ಯೆ, ಸಂಸ್ಕಾರ ಕೊಟ್ಟರೆ ಭೂಮಿ ಮತ್ತು ಅಂತರಿಕ್ಷದಲ್ಲಿಯೂ ಸಾಧನೆ ಮಾಡಬಹುದು ಎಂಬುದಕ್ಕೆ ಸುನೀತಾ ವಿಲಿಯಮ್ಸ್ ಉದಾಹರಣೆಯಾಗಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯರು ಸಾಧನೆ ಮಾಡುತ್ತಿದ್ದಾರೆ, ಸ್ಪರ್ಧಿಸುತ್ತಿದ್ದಾರೆ. ಮಹಿಳೆಯರಿಗೆ ಯಾವುದೂ ಅಸಾಧ್ಯವಲ್ಲ ಎಂಬುದನ್ನು ಸಾಬೀತುಪಡಿಸಿದ್ದಾರೆ. ಹೆಣ್ಣುಮಕ್ಕಳಿಗೆ ವಿದ್ಯೆ ಕೊಡಬೇಕು. ಸಂಸ್ಕಾರ ನೀಡಬೇಕು ಎಂದು ಹೇಳಿದರು.



ಮುಖ್ಯ ಅತಿಥಿಗಳಾಗಿ ಸುವರ್ಣ ಹೊಸಂಗಡಿ ಉಪಸ್ಥಿತರಿದ್ದರು. ಮಂಜುಳಾ ಬುಳ್ಳಾ ಮಾರ್ಗದರ್ಶನದಲ್ಲಿ ಜೆ.ಸಿ. ಪ್ರೌಢಶಾಲೆಯ ಮಕ್ಕಳಿಂದ ಆಕರ್ಷಕ ಯೋಗ ಪ್ರದರ್ಶನ ನಡೆಯಿತು. ವಚನ ಸಂಗೀತವನ್ನು ಕುಮಾರಸ್ವಾಮಿ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಪುಷ್ಪ ಭಂಡಾರಿ, ವಚನ ಚಿಂತನವನ್ನು ಜಯಶ್ರೀ ಹಳ್ಳಿಕೇರಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಸುಗಲಾ ಹಿರೇಮಠ ಹಾಗೂ ಉಮಾ ಕವಳಿಕಾಯಿ ವಹಿಸಿಕೊಂಡಿದ್ದರು. ಅಕ್ಕಮಹಾದೇವಿ ಯೋಗ ಕೇಂದ್ರದ ಎಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

ಅಕ್ಕಮಹಾದೇವಿ ಯೋಗ ಕೇಂದ್ರದ ಅಧ್ಯಕ್ಷರಾದ ಸುವರ್ಣ ಹೊಸಂಗಡಿ ಸ್ವಾಗತಿಸಿದರು.ಶ್ರೀದೇವಿ ಶೆಟ್ಟರ ಪರಿಚಯಿಸಿದರೆ, ಅಕ್ಕಮಹಾದೇವಿ ಚಟ್ಟಿ ಅಭಿನಂದನಾ ಪತ್ರ ಓದಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪನ್ಯಾಸಕರಾಗಿ ಆಗಮಿಸಿದ ಧಾರವಾಡದ ಸಾಹಿತಿಗಳಾದ ಡಾ. ಮಾಲತಿ ಪಟ್ಟಣಶೆಟ್ಟಿ ಮಾತನಾಡಿ, ಮಠಗಳು ಸಂಸ್ಕೃತಿಯ ಸಂಕೇತಗಳು. ಶಿಸ್ತಿನ ನಿವಾಸಗಳು. ಅಕ್ಕಮಹಾದೇವಿ ಮೊದಲ ಮಹಿಳಾವಾದಿ ಚಿಂತಕಿ. ತನ್ನ ಯೋಗ್ಯತೆಯ ಅರಿವು ಇತ್ತು. ಅಂತೇಯೇ ಉತ್ತುಂಗಕ್ಕೆ ಏರಿದಳು. ದೇವರು ಎಲ್ಲಾ ಕಡೆ ಇರಲು ಸಾಧ್ಯವಿಲ್ಲ. ಆದ್ದರಿಂದ ಮಹಿಳೆಯರನ್ನು ಹುಟ್ಟಿಸಿದರು. ಸ್ವಾತಂತ್ರವೆಂದರೆ ಸಂತೋಷ. ಗಂಡನ ಆಯ್ಕೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸ್ವಾತಂತ್ರ್ಯ ಇರಬೇಕು. ಹೆಣ್ಣಿಗೆ ದೇವರು ಸಹನೆ, ತಾಳ್ಮೆಯನ್ನು ಕೊಟ್ಟಿದ್ದಾನೆ. ಹೆಣ್ಣುಮಕ್ಕಳು ಆರ್ಥಿಕವಾಗಿ ಸಬಲರಾಗಬೇಕು ಎಂದರು.

# ಗೋಡಂಬಿ ಬೆಳೆ ವಿಚಾರ ಸಂಕಿರಣ

■ ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ

ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನಕೇಂದ್ರ, ಹುಲಕೋಟಿ ಹಾಗೂ ಗೋಡಂಬಿ ಮತ್ತು ಕೊಕೊ ಅಭಿವೃದ್ಧಿ ನಿರ್ದೇಶನಾಲಯ ಕೋಚಿನ್ ಇವರ ಸಂಯುಕ್ತಾಶ್ರಯದಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಗೋಡಂಬಿ ಬೆಳೆ ವಿಚಾರ ಸಂಕಿರಣವನ್ನು ಆಯೋಜಿಸಲಾಗಿತ್ತು.

ಕೆಳದಿ ಶಿವಪ್ಪ ನಾಯಕ ಕೃಷಿ ಹಾಗೂ ತೋಟಗಾರಿಕೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ನಾಗರಾಜಪ್ಪ ಅಡಿವೆಪ್ಪಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಗೋಡಂಬಿ ಬೆಳೆಯು ಅತೀ ಹೆಚ್ಚು ವಿದೇಶಿ ವಿನಿಮಯ ಗಳಿಸುತ್ತಿದ್ದು, ಗದಗ ಜಿಲ್ಲೆಯ ವಾತಾವರಣ ಈ ಬೆಳೆಗೆ ಸೂಕ್ತವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.




ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ರಾಮೇಗೌಡ ಜಿ.ಕೆ ಗೋಡಂಬಿ ಬೆಳೆಯಲ್ಲಿ ಬರುವ ಪ್ರಮುಖ ಕೀಟ ಮತ್ತು ರೋಗಗಳು ಹಾಗೂ ಅವುಗಳ ಹತೋಟಿ ಕ್ರಮಗಳ ಕುರಿತು ಮಾಹಿತಿ ನೀಡಿದರು. ಗದಗ ಜಿಲ್ಲೆಯ ಗೋಡಂಬಿ ಬೆಳೆಗಾರರ ಸಂಘದ ಅಧ್ಯಕ್ಷ ಜಿ.ಆರ್. ಓದುಗೌಡರ್ ಮಾತನಾಡಿ, ಗದಗ ಜಿಲ್ಲೆಯಲ್ಲಿ ಬೆಳೆಯುವ ಗೋಡಂಬಿಯು ಉತ್ಕೃಷ್ಟ ಗುಣಮಟ್ಟದ್ದಾಗಿದ್ದು, ರಫ್ತು ಮಾಡಲು ಯೋಗ್ಯವಾಗಿದೆ. ಕೃಷಿ ವಿಜ್ಞಾನ ಕೇಂದ್ರದ ತಾಂತ್ರಿಕ ಸಲಹೆಯಿಂದ ಹುಲಕೋಟಿಯಲ್ಲಿ ಗೋಡಂಬಿ ಸಂಸ್ಕರಣಾ ಘಟಕವನ್ನು ಸ್ಥಾಪಿಸಲಾಗಿದ್ದು, ಇದರಿಂದ ಗೋಡಂಬಿ ಬೆಳೆಗಾರರಿಗೆ ಉತ್ತಮ ಧಾರಣೆ ದೊರೆಯುತ್ತಿದೆ ಎಂದರು.

ಗೋಡಂಬಿ ಬೆಳೆಗಾರರ ಸಂಘದ ಉಪಾಧ್ಯಕ್ಷ ಈಶ್ವರಪ್ಪ ಹಂಚಿನಾಳ ಗೋಡಂಬಿ ಬೆಳೆಯಲ್ಲಿ ರೈತರು ಎದುರಿಸುತ್ತಿರುವ ಸವಾಲುಗಳ ಕುರಿತು ಮಾತನಾಡಿದರು. ಗದಗ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರಾದ ಶಶಿಕಾಂತ ಕೋಟಿಮನಿ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಮಾತನಾಡಿದರು.

ಎನ್.ಎಚ್. ಭಂಡಿ ಸ್ವಾಗತಿಸಿದರು. ಹೇಮಾವತಿ ಹಿರೇಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು, ಡಾ. ವಿನಾಯಕ ನಿರಂಜನ್ ನಿರೂಪಿಸಿದರು. ಡಾ. ಕೆ.ವ್ಹಿ. ಪಾಟೀಲ ವಂದಿಸಿದರು. ಹುಲಕೋಟಿ ಗ್ರಾಮದ ಪ್ರಗತಿಪರ ರೈತರಾದ ವಿಶ್ವನಾಥಗೌಡ ಹಿರೇಗೌಡರ್, ಸುಭಾಸಗೌಡ ಆದಪ್ಪಗೌಡರ್, ಕೆ.ವ್ಹಿ. ಆದಪ್ಪಗೌಡರ್ ಇನ್ನಿತರರು ಉಪಸ್ಥಿತರಿದ್ದರು.

ಗದಗ ಜಿಲ್ಲೆಯ ಸುಮಾರು 140ಕ್ಕೂ ಹೆಚ್ಚು ಗೋಡಂಬಿ ಬೆಳೆಗಾರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸಮಾನತೆಯಿಂದ ಸಮೃದ್ಧ ಭಾರತ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಹಿಳೆ-ಪುರುಷ ಸಮಾನತೆ ಸಾಧ್ಯವಾದಾಗ ಮಾತ್ರ ಸಮಗ್ರ ಮತ್ತು ಸಮೃದ್ಧ ಭಾರತ ನಿರ್ಮಾಣವಾಗಬಲ್ಲದು ಎಂದು ನೈರುತ್ಯ ರೈಲ್ವೆ ವಲಯದ ಹಣಕಾಸು ಸಲಹೆಗಾರರು ಹಾಗೂ ಮುಖ್ಯ ಲೆಕ್ಕಾಧಿಕಾರಿ ಕುಸುಮಾ ಹರಿಪ್ರಸಾದ ಅಭಿಪ್ರಾಯಪಟ್ಟರು.

ಕೇಶ್ವಾಪುರದ ನೈರುತ್ಯ ರೈಲ್ವೆ ಕನ್ನಡ ಸಂಘದ ವತಿಯಿಂದ ಶುಕ್ರವಾರ ಕೇಂದ್ರ ಕಛೇರಿಯಲ್ಲಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ತಾನು ಅಬಲೆಯಲ್ಲ ಸಬಲೆ ಎಂಬುದನ್ನು ಮಹಿಳೆಯರು ಇಂದು ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡುವುದರ ಮೂಲಕ ತೋರಿಸುತ್ತಿದ್ದಾರೆ. ಶಿವಾಜಿಯ ತಾಯಿ ಜೀಜಾಬಾಯಿ, ಕಿತ್ತೂರು ರಾಣಿ ಚನ್ನಮ್ಮ, ಅಕ್ಕ ಮಹಾದೇವಿ, ಕಲ್ಪನಾ ಚಾವ್ಲಾ, ಸುನೀತಾ ವಿಲಿಯಮ್ಸ್ ಸೇರಿದಂತೆ ಹಲವು ಮಹಿಳೆಯರು ಇತಿಹಾಸದಲ್ಲಿ ಹೆಸರು ದಾಖಲಿಸಿದ್ದಾರೆ ಎಂದರು.

ನೈರುತ್ಯ ರೈಲ್ವೆ ಮಹಿಳಾ ಕಲ್ಯಾಣ ಸಂಸ್ಥೆಯ ಕಾರ್ಯದರ್ಶಿ ಅನಿತಾ ಶಾಸ್ತ್ರಿ ಮಾತನಾಡಿ, ಮಹಿಳೆ ಎಷ್ಟೆಲ್ಲಾ ಸಾಧನೆ ಮಾಡಿದರೂ ಆಕೆಯ




ಮೇಲಿನ ಶೋಷಣೆ ನಿಲ್ಲುತ್ತಿಲ್ಲ ಎಂಬುದು ಕಳವಳದ ಸಂಗತಿ. ಹೆಣ್ಣುಮಕ್ಕಳಿಗೆ ಕಾನೂನುಗಳ ಅರಿವು ಇರಬೇಕು ಎಂದರು.

ಕೇಂದ್ರೀಯ ರೈಲ್ವೆ ಆಸ್ಪತ್ರೆಯ ಹಿರಿಯ ವಿಭಾಗೀಯ ವೈದ್ಯಾಧಿಕಾರಿ ತೇಜಸ್ವಿನಿ ಗೌರಿಪುರ ಮಾತನಾಡಿ, ಮಹಿಳೆಯರು ತಮ್ಮ ಹಕ್ಕುಗಳನ್ನು ಪಡೆಯಲು ಸಂಘಟನೆ ಮುಖ್ಯ. ಎಲ್ಲರೂ ಒಂದಾಗಿ ದೌರ್ಜನ್ಯವನ್ನು ವಿರೋಧಿಸಬೇಕು ಎಂದರು.

ಸಂಘದ ಅಧ್ಯಕ್ಷ ಬಿ.ಎಲ್. ಶಿವಕುಮಾರ, ಪ್ರಧಾನ ಕಾರ್ಯದರ್ಶಿ ಶಂಭುಲಿಂಗ ಬಿರಾದಾರ, ಮೈಲಾರಲಿಂಗ ಕಬ್ಬೂರ, ಜೈರಾಮ, ಪ್ರಾಣೇಶ, ಚಂದ್ರಶೇಖರ, ಮಹಾಂತಪ್ಪ ನಂದೂರ, ಮಹೇಶ ಎ.ಎಸ್, ಸಿ.ಎಂ. ಮುನಿಸ್ವಾಮಿ, ಕಿರಣ ಚಿನ್ನಾ ರಾಠೋಡ, ಜಗದೀಶ ಭಜಂತ್ರಿ, ರಮೇಶ ಚವ್ಹಾಣ, ಆದಯ್ಯ ಹಿರೇಮಠ, ಚನ್ನಬಸಪ್ಪ ಚೌಗಲಾ, ಸುರೇಶ ರಾಠೋಡ, ರಂಗಪ್ಪ, ಗೂಳಪ್ಪ ನಂದಿ, ಶ್ರೀನಿವಾಸ, ಅಜ್ಜಪ್ಪ ಯತ್ನಟ್ಟಿ, ಶಾಂತಗೌಡ, ಪುಂಡಲೀಕ ಮುಂತಾದವರಿದ್ದರು. ಮಮತಾ ಮ್ಯಾಗೇರಿ ಸ್ವಾಗತಿಸಿದರು.

## ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಹೊತ್ತಿ ಉರಿದ ಮನೆ!



■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಮನೆಯೊಂದು ಹೊತ್ತಿ ಉರಿದಿರುವ ಘಟನೆ ಕಲಬುರಗಿ ಜಿಲ್ಲೆ ಕಮಲಾಪುರ ತಾಲೂಕಿನ ದೇವಲುನಾಯಕ ತಾಂಡಾದಲ್ಲಿ ಜರುಗಿದೆ.

ಘಟನೆ ಪರಿಣಾಮ ಮನೆಯಲ್ಲಿದ್ದ ಹಣ, ಚಿನ್ನಾಭರಣ, ಫ್ರಿಡ್ಜ್, ಟಿವಿ, ದವಸಧಾನ್ಯ ಸೇರಿದಂತೆ ಹಲವು ವಸ್ತುಗಳು ಬೆಂಕಿಗಾಹುತಿಯಾಗಿದೆ. ತಾಂಡಾದ ಕಮಲಾಬಾಯಿ ರಾಠೋಡ್ ಎಂಬುವರಿಗೆ ಸೇರಿದ ಮನೆ ಇದಾಗಿದ್ದು, ಘಟನೆಯಿಂದ ಸುಮಾರು ನಾಲ್ಕು ಲಕ್ಷ ಮೌಲ್ಯದ ವಸ್ತುಗಳು ಬೆಂಕಿಗಾಹುತಿಯಾಗಿದೆ.

ಕಮಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಂಸ್ಕೃತ ಸಂಭಾಷಣಾ ಶಿಬಿರ ಮುಕ್ತಾಯ


■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕುರ್ತಕೋಟಿ ಗ್ರಾಮದ ಶ್ರೀ ಬಸವೇಶ್ವರ ಸಮುದಾಯ ಭವನದಲ್ಲಿ ಕಳೆದ 10 ದಿನಗಳಿಂದ ರೇಖಾ ಮಡಿವಾಳರ ಭಗಿನಿ ಅವರಿಂದ ನಡೆಸಲಾದ ಸಂಸ್ಕೃ ಬಾಲಕೇಂದ್ರದ ಸಂಭಾಷಣಾ ಶಿಬಿರ ಮುಕ್ತಾಯಗೊಂಡಿತು.

ಗ್ರಾಮದ ಮುಖಂಡ ಅಪ್ಪಣ್ಣ ಇನಾಮತಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಗದಗ ಜಿಲ್ಲಾ ಸಂಸ್ಕೃತ ಪಾಠಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಎಸ್. ಸಾಲಿಮಠ, ಯಲ್ಲಪ್ಪ ಅಡರಕಟ್ಟಿ, ಸಂಸ್ಕೃತ ಭಾರತಿ ಜಿಲ್ಲಾ ಸಂಯೋಜಕರಾದ ಎಸ್. ಎನ್. ಶಿಂಪಿಗೇರ, ಮೌನೇಶ್ ಭಜಂತ್ರಿ ಮಾತನಾಡಿದರು. ಉಮಾ ಭಜಂತ್ರಿ ಕಾರ್ಯಕ್ರಮವನ್ನು ನಿರೂಪಿಸಿದರು. ಶಿಬಿರದ ಸಂಚಾಲಕಿ ರೇಖಾ ಮಡಿವಾಳರ ವಂದಿಸಿದರು.

## ನಿಧನ

### ರವಿ ಗಿರಣಿ



ಗದಗ: ಟಿವಿ9 ಸುದ್ದಿವಾಹಿನಿಯ ಗದಗ ಜಿಲ್ಲಾ ಕ್ಯಾಮೆರಾಮನ್ ರವಿ ಗಿರಣಿ (40) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ, ತಾಯಿ, ಸಹೋದರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ರವಿ ಗಿರಣಿ ನಿಧನಕ್ಕೆ ಜಿಲ್ಲೆಯ ಪತ್ರಕರ್ತರು ಸಂತಾಪ ಸೂಚಿಸಿದ್ದಾರೆ.


ಕರ್ನಾಟಕ ಸರಕಾರ

**ಉಪ ಅರಣ್ಯ ಸಂರಕ್ಷಣಾಧಿಕಾರಿಗಳ, ಕಛೇರಿ ಗದಗ ವಿಭಾಗ, ಗದಗ ಬಿಂಕದಕಟ್ಟಿ-582103**

**ದೂರವಾಣಿ : 08372-200978 ಇ-ಮೇಲ್ : dyconservatorgadag@gmail.com**

ಕ್ರ.ಸಂ: ಎ2/ಬಿಜಿಟಿ/ಹೊರಗುತ್ತಿಗೆ/ಸಿಆರ್-17/2024-25, ದಿನಾಂಕ : 19-03-2025

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

ಗದಗ ವಿಭಾಗದಲ್ಲಿರುವ ವಿಭಾಗ, ಉಪ ವಿಭಾಗ ಮತ್ತು ವಲಯ ಕಚೇರಿಗಳಲ್ಲಿ 2025-26 ನೇ ಸಾಲಿನಲ್ಲಿ ವಿವಿಧ ಯೋಜನೆ & ಲೆಕ್ಕ ಶೀರ್ಷಿಕೆಯಡಿ ಅರಣ್ಯ ರಕ್ಷಣಾ ಶಿಬಿರಗಳಿಗೆ ಕಾವಲುಗಾರ ಹಾಗೂ 'ಡಿ' ಗ್ರೂಪ್ ನೌಕರರನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾನವ ಸಂಪನ್ಮೂಲ ಸೇವೆ ಪೂರೈಕೆ ಕುರಿತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಇ-ಪೋರ್ಟಲ್ ನೋಂದಾಯಿತ ಗುತ್ತಿಗೆದಾರರಿಂದ ಪಾರದರ್ಶಕತೆ ನಿಯಮ ಹಾಗೂ ಅಧಿನಿಯಮಗಳನ್ವಯ ದಿನಾಂಕ : **01-04-2025** ರಿಂದ **31-03-2026**ರ ಅವಧಿಯವರೆಗೆ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್-2.0 ಆವೃತ್ತಿ ಮೂಲಕ ಇ-ಟೆಂಡರ್‌ನ್ನು https://kppp.karnataka.gov.in ನಲ್ಲಿ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ವೇಳಾಪಟ್ಟಿ ಈ ಕೆಳಗಿನಂತಿರುತ್ತದೆ.

| ಕ್ರ.ಸಂ | ವಿವರ | ವೇಳಾಪಟ್ಟಿ |
|---|---|---|
| 1 | ಇ-ಟೆಂಡರ್ ಪ್ರಕಟಣೆ ದಿನಾಂಕ | **19-03-2025** |
| 2 | ತಾಂತ್ರಿಕ ಬಿಡ್ ಸಲ್ಲಿಸಲು ಕೊನೆಯ ದಿನಾಂಕ | **03-04-2025** ಅಪರಾಹ್ನ 4.00 ಗಂಟೆವರೆಗೆ |
| 3 | ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಸಮಯ | **05-04-2025** ಬೆಳಿಗ್ಗೆ 11.00 ಗಂಟೆವರೆಗೆ |
| 4 | ಟೆಂಡರ್ ಪರಿಶೀಲನೆ ದಿನಾಂಕ | **05-04-2025** |
| 5 | ಆರ್ಥಿಕ ಬಿಡ್ ತೆರೆಯುವ ದಿನಾಂಕ ಸಮಯ | **07-04-2025** ಬೆಳಿಗ್ಗೆ 11.00 ಗಂಟೆಗೆ |
| 6 | ಟೆಂಡರ್‌ಗಿಟ್ಟ ಗರಿಷ್ಠ ಮೊತ್ತ | ರೂ. **36,47,100.00** ಇಂಡೆಂಟ್ ನಂ. **1090**<br>ಇ.ಎಂ.ಡಿ. ಮೊತ್ತ ರೂ. **91,200.00** |
| 7 | ಟೆಂಡರ್‌ಗಿಟ್ಟ ಕನಿಷ್ಠ ಮೊತ್ತ | ರೂ. **35,16,600.00** ಲಕ್ಷ, ಇಂಡೆಂಟ್ ನಂ. **1091**<br>ಇ.ಎಂ.ಡಿ. ಮೊತ್ತ ರೂ. **87,900.00** |

ಮೇಲಿನ ದಿನಾಂಕಗಳಂದು ಸಾರ್ವತ್ರಿಕ ರಜೆಯಿದ್ದಲ್ಲಿ/ ಸಾರ್ವತ್ರಿಕ ರಜೆಯೆಂದು ಘೋಷಣೆಯಾದಲ್ಲಿ ಮುಂದಿನ ದಿನಾಂಕಗಳನ್ನು ಪರಿಗಣಿಸುವುದು. ಟೆಂಡರ್‌ಗೆ ಸಂಬಂಧಿಸಿದಂತೆ ಷರತ್ತು ಹಾಗೂ ಹೆಚ್ಚಿನ ಮಾಹಿತಿ, ವಿವರಗಳನ್ನು ಕರ್ನಾಟಕ ಸರ್ಕಾರದ https://kppp.karnataka.gov.in ಇ-ಪೋರ್ಟಲ್ ಮೂಲಕ ಪಡೆದುಕೊಳ್ಳತಕ್ಕದ್ದು.

ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/716/2024-25 **ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪ ವಿಭಾಗ, ಗದಗ.**



## ಗ್ರಾಮ ಪಂಚಾಯತ ಕಾರ್ಯಾಲಯ, ಚಿಕ್ಕಹಂದಿಗೋಳ

ತಾಲೂಕ :- ಗದಗ ಜಿಲ್ಲಾ:- ಗದಗ

ಸಂ.ಗ್ರಾ.ಪಂ.ಚಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿ: 21-03-2025

**: ದರಪಟ್ಟಿ ಪ್ರಕಟಣೆ :**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕಹಂದಿಗೋಳ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಚಿಕ್ಕಹಂದಿಗೋಳ ಗ್ರಾಮದ ಲಾಲಸಾಬ ವಡ್ಡಟ್ಟಿಯವರ ಮನೆಯಿಂದ ಸತ್ಯವ್ವ ಬಾಬಣ್ಣವರ ಮನೆವರೆಗೆ ಸಿ.ಸಿ.ರಸ್ತೆ ನಿರ್ಮಾಣ | 144233.00 | 500.00 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ : 22-03-2025 ರಿಂದ 28-03-2025 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 28-03-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 4.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 29-03-2025 ರ ಮಧ್ಯಾಹ್ನ 3.00 ಗಂಟೆ

ನಿಬಂಧನೆಗಳು : 1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಚಿಕ್ಕಹಂದಿಗೋಳದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತ ಚಿಕ್ಕಹಂದಿಗೋಳ

ಸಹಿ ಆಗಿದೆ/-
**ಅಧ್ಯಕ್ಷರು,**
ಗ್ರಾಮ ಪಂಚಾಯತ ಚಿಕ್ಕಹಂದಿಗೋಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka